ಸಂಪುಟ : 11 ಸಂಚಿಕೆ: 109 ಪುಟ : 4+2 ಬೆಲೆ: 3.00 ರವಿವಾರ ಮೇ 31 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 109 Pages : 4+2 Price : 3.00 Sunday May 31 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಮುಂಗಾರು ಬಿತ್ತನೆಗೆ ಆತುರ ಬೇಡ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಾದ್ಯಂತ ಮುಂಗಾರು ಬಿತ್ತನೆ ಕಾರ್ಯ ಆರಂಭವಾಗಿರುವ ಹಿನ್ನೆಲೆಯಲ್ಲಿ ರೈತರು ಆತುರದಿಂದ ಬಿತ್ತನೆ ಕೈಗೊಳ್ಳದೆ, ಮಣ್ಣಿನಲ್ಲಿ ಸಮರ್ಪಕ ತೇವಾಂಶ ಸಂಗ್ರಹವಾದ ಬಳಿಕವೇ ಬಿತ್ತನೆಗೆ ಮುಂದಾಗಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಸ್ತುತ ಜಿಲ್ಲೆಯ ಹಲವೆಡೆ ಮಳೆಯ ಪ್ರಮಾಣ ಕಡಿಮೆಯಾಗಿದ್ದು, ಮಣ್ಣಿನಲ್ಲಿ ಅಗತ್ಯ ಪ್ರಮಾಣದ ತೇವಾಂಶ ಲಭ್ಯವಾಗಿಲ್ಲ. ಈ ಪರಿಸ್ಥಿತಿಯಲ್ಲಿ ಮುಂಗಾರು ಬೆಳೆಗಳ ಬಿತ್ತನೆ ಕಾರ್ಯವನ್ನು ತ್ವರಿತವಾಗಿ ಕೈಗೊಂಡರೆ ಬೀಜಗಳ ಮೊಳಕೆಯ ಪ್ರಮಾಣ ಕಡಿಮೆಯಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಲಾಗಿದೆ.

ತೇವಾಂಶ ಕೊರತೆಯಿರುವ ಮಣ್ಣಿನಲ್ಲಿ ಬಿತ್ತನೆ ಮಾಡಿದಲ್ಲಿ ಬೆಳೆಯ ಬೆಳವಣಿಗೆ ಕುಂಠಿತಗೊಂಡು ಬೆಳೆ ವಿಫಲವಾಗುವ ಸಂಭವ ಹೆಚ್ಚಿದೆ. ಇದರಿಂದ ರೈತರಿಗೆ ಹೆಚ್ಚುವರಿ ವೆಚ್ಚದ ಜೊತೆಗೆ ಆರ್ಥಿಕ ನಷ್ಟವೂ ಉಂಟಾಗುವ ಸಾಧ್ಯತೆ ಇದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಆದ್ದರಿಂದ ಜಿಲ್ಲೆಯ ರೈತ ಬಾಂಧವರು ಸ್ಥಳೀಯ ಹವಾಮಾನ ಮುನ್ಸೂಚನೆ, ಕೃಷಿ ಇಲಾಖೆಯ ಸಲಹೆಗಳು ಹಾಗೂ ಮಣ್ಣಿನ ತೇವಾಂಶದ ಸ್ಥಿತಿಯನ್ನು ಪರಿಗಣಿಸಿ ಮಾತ್ರ ಬಿತ್ತನೆ ಕಾರ್ಯ ಕೈಗೊಳ್ಳುವಂತೆ ಮನವಿ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ರೈತರು ಸಮೀಪದ ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಕಸ ವಿಂಗಡಣೆ ಕಡ್ಡಾಯ: ನಿಯಮ ಉಲ್ಲಂಘಿಸಿದರೆ ದಂಡ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಯ ಸಾರ್ವಜನಿಕರು ಪರಿಸರ ಸಂರಕ್ಷಣೆ ಹಾಗೂ ಸ್ವಚ್ಛತೆಯ ಹಿತದೃಷ್ಟಿಯಿಂದ ತಮ್ಮ ಮನೆಯ ಕಸವನ್ನು ಕಡ್ಡಾಯವಾಗಿ ನಾಲ್ಕು ಪ್ರತ್ಯೇಕ ವಿಭಾಗಗಳಾಗಿ ವಿಂಗಡಿಸಿ ಪಟ್ಟಣ ಪಂಚಾಯತಿ ಕಸದ ವಾಹನಗಳಿಗೆ ನೀಡಬೇಕು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಸಿ ಕಸ (Wet Waste) ಅನ್ನು ಹಸಿರು ಬಕೆಟ್‌ನಲ್ಲಿ ಸಂಗ್ರಹಿಸಬೇಕು. ಇದರಲ್ಲಿ ಅಡುಗೆಮನೆ ತ್ಯಾಜ್ಯ, ತರಕಾರಿ ಮತ್ತು ಹಣ್ಣುಗಳ ಸಿಪ್ಪೆ, ಉಳಿದ ಆಹಾರ, ಟೀ ಹಾಗೂ ಕಾಫಿ ಪುಡಿ ಸೇರಿದಂತೆ ನೈಸರ್ಗಿಕವಾಗಿ ಕೊಳೆಯುವ ವಸ್ತುಗಳು ಸೇರಿವೆ.

ಒಣ ಕಸ (Dry Waste) ಅನ್ನು ನೀಲಿ ಬಕೆಟ್‌ನಲ್ಲಿ ಪ್ರತ್ಯೇಕಿಸಬೇಕು. ಮರುಬಳಕೆ ಮಾಡಬಹುದಾದ ಪ್ಲಾಸ್ಟಿಕ್ ವಸ್ತುಗಳು, ಕಾಗದ, ರಟ್ಟಿನ ಪೆಟ್ಟಿಗೆಗಳು, ಲೋಹದ ವಸ್ತುಗಳು, ಬಟ್ಟೆ ಹಾಗೂ ರಬ್ಬರ್ ವಸ್ತುಗಳು ಇದರಲ್ಲಿ ಸೇರಿವೆ.

ನೈರ್ಮಲ್ಯ ಕಸ (Sanitary Waste) ಅನ್ನು ಕೆಂಪು ಬಕೆಟ್‌ನಲ್ಲಿ ಸಂಗ್ರಹಿಸಿ ಪತ್ರಿಕೆಯಲ್ಲಿ ಸುತ್ತಿ ಕೆಂಪು ಗುರುತು ಮಾಡಿ ನೀಡಬೇಕು. ಬಳಸಿದ ಡೈಪರ್‌ಗಳು, ಸ್ಯಾನಿಟರಿ ನ್ಯಾಪ್ಕಿನ್‌ಗಳು, ಟ್ಯಾಂಪೋನ್‌ಗಳು ಸೇರಿದಂತೆ ಆರೋಗ್ಯದ ದೃಷ್ಟಿಯಿಂದ ಜಾಗರೂಕತೆಯಿಂದ ವಿಲೇವಾರಿ ಮಾಡಬೇಕಾದ ವಸ್ತುಗಳು ಇದರಲ್ಲಿ ಸೇರಿವೆ.

ವಿಶೇಷ ಕಾಳಜಿ ಕಸ (Special Waste) ಅನ್ನು ಕಪ್ಪು ಬಕೆಟ್‌ನಲ್ಲಿ ಪ್ರತ್ಯೇಕಿಸಬೇಕು. ಬಣ್ಣದ ಡಬ್ಬಿಗಳು, ಕೀಟನಾಶಕ ಬಾಟಲಿಗಳು, ಸಿಎಫ್‌ಎಲ್

▸▸ 3ನೇ ಪುಟಕ್ಕೆ

### ಜನಿವಾರ ಕಿತ್ತೊಗೆದ ಬಸವಣ್ಣನಿಗೆ ಮತ್ತೆ ಜನಿವಾರ ತೊಡಿಸುವ ಯತ್ನ- ಸಾಹಿತಿ ಬಸವರಾಜ ಸೂಳಿಭಾವಿ ತೀವ್ರ ವಾಗ್ದಾಳಿ

# ಲಿಂಗಾಯತ ಧರ್ಮ ನಾಶಕ್ಕೆ ಸಂಚು!

■ ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗಾಯತ ಧರ್ಮವು ಮಾನವೀಯತೆ, ಸಮಾನತೆ ಮತ್ತು ಸಹಬಾಳ್ವೆಯ ತತ್ವಗಳ ಮೇಲೆ ನಿಂತಿರುವ ಸ್ವತಂತ್ರ ಧರ್ಮವಾಗಿದ್ದು, ಹಿಂದೂ ಸಮಾವೇಶಗಳ ಹೆಸರಿನಲ್ಲಿ ಅದನ್ನು ಒಡೆಯುವ ಹಾಗೂ ಬಸವ ತತ್ವವನ್ನು ಮಸುಕುಗೊಳಿಸುವ ಹುನ್ನಾರ ನಡೆಯುತ್ತಿದೆ ಎಂದು ಸಾಹಿತಿ ಬಸವರಾಜ ಸೂಳಿಭಾವಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ "ಸಮಾನತೆಗಾಗಿ ನಾವು" ಸಂಘಟನೆ ಆಶ್ರಯದಲ್ಲಿ ವಿವಿಧ ಪ್ರಗತಿಪರ ಸಂಘಟನೆಗಳು ಹಾಗೂ ದಲಿತ ಸಂಘಟನೆಗಳ ಸಹಯೋಗದಲ್ಲಿ ನಡೆದ ವಚನ ಅರಿವಿನ ಮಹಾಯಾನ, ಬಸವಾದಿ ಶಿವಶರಣರ ವಚನಗಳ ಸಾಮೂಹಿಕ ಪಠಣ ಮತ್ತು ಸಂವಿಧಾನದ ಪೂರ್ವಪೀಠಿಕೆಯ ಸಮಾನತೆಯ ಉದ್ಘೋಷ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಲಿಂಗಾಯತ ಧರ್ಮದ ವೈಶಿಷ್ಟ್ಯತೆ ಮತ್ತು ಬಸವ ತತ್ವಗಳ ಬಗ್ಗೆ ಪ್ರಖರವಾಗಿ ಅಭಿಪ್ರಾಯ ವ್ಯಕ್ತಪಡಿಸಿದರು.

"ಜನಿವಾರವನ್ನು ಕಿತ್ತೊಗೆದು ಸಮಾನತೆ ತಂದ ಬಸವಣ್ಣನಿಗೆ ಮತ್ತೆ ಜನಿವಾರ ತೊಡಿಸುವ ಪ್ರಯತ್ನ ನಡೆಯುತ್ತಿದೆ. 'ದೇಹವೇ ದೇವಾಲಯ' ಎಂದ ಬಸವ ತತ್ವಕ್ಕೆ ವಿರುದ್ಧವಾಗಿ ಊರಿಗೊಂದು, ಓಣಿಗೊಂದು ದೇವಾಲಯ ನಿರ್ಮಿಸಿ ಮಹಿಳೆಯರನ್ನು




ದೇವದಾಸಿಯರನ್ನಾಗಿ ಮಾಡಿದ ವ್ಯವಸ್ಥೆಯನ್ನು ಬಸವ ತತ್ವದ ಜೊತೆ ಬೆರೆಸುವ ಅಪಾಯಕಾರಿ ಪ್ರಯತ್ನ ನಡೆಯುತ್ತಿದೆ," ಎಂದು ಆರೋಪಿಸಿದರು.

ಜಗತ್ತಿಗೆ ಮೊದಲು ಬೆಳಕಿನ ದಾರಿ ತೋರಿದವರು ಬುದ್ಧ. ನಂತರ ಬಸವಣ್ಣ ಸಮಾನತೆಯ ಲಿಂಗಾಯತ ಧರ್ಮವನ್ನು ಕೊಟ್ಟರು. ಸ್ವಾತಂತ್ರ್ಯಾನಂತರ ಡಾ. ಬಿ.ಆರ್. ಅಂಬೇಡ್ಕರ್ ಅವರು ಬುದ್ಧ ಮತ್ತು ಬಸವಣ್ಣನ ಆಶಯಗಳಿಗೆ ಸಂವಿಧಾನದ ಮೂಲಕ ಕಾನೂನಾತ್ಮಕ ಚೌಕಟ್ಟು ರೂಪಿಸಿ, "ಎಲ್ಲರೂ ಸಮಾನರು" ಎಂಬ ಸಂದೇಶ ನೀಡಿದ್ದಾರೆ ಎಂದು ಹೇಳಿದರು.

"ಸಂವಿಧಾನದ ದೃಷ್ಟಿಯಲ್ಲಿ ಯಾರೂ ಹೆಚ್ಚಲ್ಲ, ಯಾರೂ ಕಡಿಮೆಯಿಲ್ಲ. ಸಮಾನತೆಯನ್ನು ವಿರೋಧಿಸುವವರು ರಾಷ್ಟ್ರದ್ರೋಹಿಗಳೇ" ಎಂದು ಬಸವರಾಜ ಸೂಳಿಭಾವಿ ಅಸಮಾಧಾನ ವ್ಯಕ್ತಪಡಿಸಿದರು.

ವಚನ ಸಾಹಿತ್ಯವು ಜಾತಿ ಭೇದಗಳನ್ನು ಕಿತ್ತೊಗೆದು ಮನುಷ್ಯ ಪ್ರೀತಿಯ ಸಂದೇಶ ಸಾರಿದೆ. ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ಸಮಾನತೆಯ ಪರಂಪರೆಯ ಅರಿವು ಹೆಚ್ಚಿಸುವ ಇಂತಹ ಕಾರ್ಯಕ್ರಮಗಳು ಇಂದಿನ ಸಮಾಜಕ್ಕೆ ಅತ್ಯಗತ್ಯ ಎಂದು ಅಭಿಪ್ರಾಯಪಟ್ಟರು.

> "ಹಿಂದೂ ಧರ್ಮಕ್ಕೆ ಯಾವುದೇ ಸ್ಪಷ್ಟ ಆಧಾರ ಇಲ್ಲ. ಧರ್ಮಗ್ರಂಥ ಇಲ್ಲ, ಸಂಸ್ಥಾಪಕರು ಇಲ್ಲ. ಆದರೆ ಲಿಂಗಾಯತ ಧರ್ಮಕ್ಕೆ ಬಸವಣ್ಣ, ಶಿವಶರಣರು ಮತ್ತು ವಚನಗಳೇ ಆಧಾರ. ಇದು ಎಲ್ಲರನ್ನೂ ಒಂದೇ ದೃಷ್ಟಿಯಿಂದ ನೋಡುವ ಸಮಾನತೆಯ ಧರ್ಮ"
>
> – ಬಸವರಾಜ ಸೂಳಿಭಾವಿ, ಸಾಹಿತಿ

ಕಾರ್ಯಕ್ರಮದಲ್ಲಿ ಅಶೋಕ ಬರಗುಂಡಿ, ಶೇಕಣ್ಣ ಕವಳಿಕಾಯಿ, ಶಿವಾನಂದ ತಮ್ಮಣ್ಣವರ, ಎಂ.ಎಸ್. ಹಡಪದ, ಗೌರಕ್ಕ ಬಡಿಗಣ್ಣವರ, ಎಚ್. ಎಸ್. ಹರ್ಲಾಪುರ, ರವೀಂದ್ರ ಹೊನವಾಡ, ಮುತ್ತು ಬಿಳೆಯಲಿ, ಎಸ್.ಎನ್. ಬಳ್ಳಾರಿ, ರಾಮಚಂದ್ರ ಹಂಸನೂರ, ಶರೀಫ್ ಬಿಳೆಯಲಿ, ಪರಶು ಕಾಳೆ, ಮಲ್ಲಿಕಾರ್ಜುನ ಖಂಡಮ್ಮನವರ, ಎ.ಯಿ. ನವಲಗುಂದ, ಎ.ಕೆ. ಮುಲ್ಲಾನವರ, ಪಾಲಾಕ್ಷಿ ಗಡದಿನ್ನಿ ಹಾಗೂ ಮುತ್ತು ಹಾಳಕೇರಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಬಸವಾದಿ ಶಿವಶರಣರ ವಚನಗಳ ಸಾಮೂಹಿಕ ಪಠಣ ನಡೆಯಿತು. ಶರೀಫ್ ಬಿಳಿಯಲಿ ಹಾಗೂ ಸಂಗಡಿಗರು ವಚನಗೀತೆಗಳನ್ನು ಹಾಡಿ ಗಮನ ಸೆಳೆದರು. ಸಾರ್ವಜನಿಕರಿಗೆ ಸಾವಿರಾರು ಕರಪತ್ರಗಳನ್ನು ಹಂಚುವ ಮೂಲಕ ಜಾಗೃತಿ ಮೂಡಿಸುವ ಕಾರ್ಯವೂ ನಡೆಯಿತು.

### ಪುರಸಭೆ ವಿರುದ್ಧ ಸ್ಥಳೀಯ ನಿವಾಸಿಗಳ ಆಕ್ರೋಶ-ಸಮಸ್ಯೆ ಬಗೆಹರಿಸದಿದ್ದರೆ ಕೊಡ ಹಿಡಿದು ಪ್ರತಿಭಟನೆ ಎಚ್ಚರಿಕೆ

# ಭಗೀರಥನ ಓಣಿಯಲ್ಲೇ ನೀರಿನ ಬರ!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಕಳೆದ ಎರಡು-ಮೂರು ವರ್ಷಗಳಿಂದ ಕುಡಿಯುವ ನೀರಿನ ಸಮಸ್ಯೆ ನಿರಂತರವಾಗಿದ್ದು, ತುಂಗಭದ್ರ ನೀರು ಪೂರೈಕೆಯಾಗುತ್ತಿದ್ದರೂ ಸಮರ್ಪಕ ನಿರ್ವಹಣೆಯ ಕೊರತೆಯಿಂದ ಜನರಿಗೆ ಸರಿಯಾಗಿ ನೀರು ಸಿಗುತ್ತಿಲ್ಲ ಎಂಬ ಆರೋಪಗಳು ಹೆಚ್ಚುತ್ತಿವೆ.

ಪಟ್ಟಣದ ಹಳೆ ಬಸ್ ನಿಲ್ದಾಣದ ಬಳಿಯ ನಿವಾಸಿಗಳು ಶನಿವಾರ ಸಾರ್ವಜನಿಕ ನಲ್ಲಿಗಳ ಬಳಿ ನೀರಿಗಾಗಿ ಗಂಟೆಗಟ್ಟಲೆ ಕಾಯ್ದು ನಿಂತ ದೃಶ್ಯ ಕಂಡು ಬಂದಿತು. ಕಳೆದ 20ರಿಂದ 30 ದಿನಗಳಿಂದ ಈ ಭಾಗಕ್ಕೆ ತುಂಗಭದ್ರ ಕುಡಿಯುವ ನೀರು ಪೂರೈಕೆಯಾಗಿಲ್ಲ ಎಂದು ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದರು.

ಸಾರ್ವಜನಿಕ ನಲ್ಲಿಗಳಲ್ಲೂ ಸಮರ್ಪಕ ನೀರು ಬಾರದ ಹಿನ್ನೆಲೆಯಲ್ಲಿ ಜನರು ಪುರಸಭೆ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಇದೇ ಭಾಗದಲ್ಲಿ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆ ಜಾರಿಗೆ ತರುವಲ್ಲಿ ಶ್ರಮಿಸಿದ ಮಾಜಿ ಶಾಸಕ ಜಿ.ಎಸ್. ಗಡ್ಡದ್ದೇವರಮಠ ಅವರ ನಿವಾಸವಿದ್ದು, "ನೀರು ತಂದ ಭಗೀರಥನ ಓಣಿಯಲ್ಲೇ ಈಗ ನೀರಿನ ಬರ ಎದುರಾಗಿದೆ" ಎಂದು



ನಿವಾಸಿಗಳು ವ್ಯಂಗ್ಯವಾಡುತ್ತಿದ್ದಾರೆ.

ನೀರಿನ ಸಮಸ್ಯೆ ಕುರಿತು ಪುರಸಭೆ ಅಧಿಕಾರಿಗಳ ಗಮನಕ್ಕೆ ತಂದರೂ ಯಾರೂ ಸ್ಪಂದಿಸುತ್ತಿಲ್ಲ. ಪಟ್ಟಣದ ಬಹುತೇಕ ಭಾಗಗಳಲ್ಲಿ ಇದೇ ಪರಿಸ್ಥಿತಿ ನಿರ್ಮಾಣವಾಗಿದ್ದು, ಜನರು ನಿತ್ಯ ಸಂಕಷ್ಟ ಅನುಭವಿಸುವಂತಾಗಿದೆ ಎಂದು ಸ್ಥಳೀಯರು ದೂರಿದರು.

> "ತುಂಗಭದ್ರ ನೀರು ಬರುತ್ತಿದೆ ಎನ್ನುವ ಮಾತು ಮಾತ್ರ ಇದೆ; ಆದರೆ ಕಳೆದ 30 ದಿನಗಳಿಂದ ನಮ್ಮ ಮನೆಗಳಿಗೆ ಒಂದು ಹನಿ ನೀರೂ ಬಂದಿಲ್ಲ"
>
> – ಸ್ಥಳೀಯ ನಿವಾಸಿಗಳು

ಕೂಡಲೇ ಸಮಸ್ಯೆ ಬಗೆಹರಿಸದಿದ್ದರೆ ಪುರಸಭೆ ಕಚೇರಿ ಎದುರು ಕೊಡಗಳನ್ನು ಇಟ್ಟು ಪ್ರತಿಭಟನೆ ನಡೆಸುವುದಾಗಿ ನಿವಾಸಿಗಳು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಉಮಾ ಮುತಗೊಂಡ, ಮುರಗಯ್ಯ ಅಕಳಂಡಸ್ವಾಮಿಮಠ, ಶಿವಯೋಗಿ ಗಡ್ಡದೇವರಮಠ, ಜ್ಯೋತಿ ಕೂಸನೂರುಮಠ, ಶೈಲಾ ಗಡ್ಡದೇವರಮಠ, ಮಲ್ಲಯ್ಯ ಗಡ್ಡದೇವರಮಠ, ಬಸನಗೌಡ ಮನ್ನಂಗಿ, ಕೊಟ್ರೇಶ್ ಕೆಸರಳ್ಳಿಮಠ, ಮಂಜುಳಾ ಕೂಸನೂರುಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಮಾದಿಗ ಸಮಾಜಕ್ಕೆ ರಾಜಕೀಯ ನ್ಯಾಯ ಒದಗಿಸಲು ಸರ್ಕಾರಕ್ಕೆ ಆಗ್ರಹ

## ಸಂಪುಟದಲ್ಲಿ ಹೆಚ್. ಆಂಜನೇಯರಿಗೆ ಸ್ಥಾನ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಕಲ್ಯಾಣ ಇಲಾಖೆಯ ಮಾಜಿ ಸಚಿವರು ಹಾಗೂ ಹಿರಿಯ ರಾಜಕಾರಣಿ ಹೆಚ್. ಆಂಜನೇಯ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಮಾದಿಗ ಸಮಾಜಕ್ಕೆ ಸಮರ್ಪಕ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಕರ್ನಾಟಕ ರಾಜ್ಯ ಮಾದಿಗ ಮಹಾಸಭಾದ ಪದಾಧಿಕಾರಿಗಳು ಆಗ್ರಹಿಸಿದ್ದಾರೆ.

2013ರಿಂದ 2018ರವರೆಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರಾಗಿ ಸೇವೆ ಸಲ್ಲಿಸಿದ್ದ ಹೆಚ್. ಆಂಜನೇಯ ಅವರು ಪ್ರಸ್ತುತವೂ ಸಕ್ರಿಯ ರಾಜಕೀಯದಲ್ಲಿ ತೊಡಗಿಸಿಕೊಂಡಿದ್ದು, ದಲಿತ ಮೀಸಲಾತಿ ಹಾಗೂ ಸಮುದಾಯಗಳ ಹಕ್ಕುಗಳ



ಪರವಾಗಿ ಧ್ವನಿ ಎತ್ತುತ್ತಾ ಬರುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ರಾಜಕೀಯ ಷಡ್ಯಂತ್ರಗಳಿಂದ 2023ರ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದ ಚುನಾವಣೆಯಲ್ಲಿ ಸೋಲು ಅನುಭವಿಸಿದ್ದರೂ ಕಾಂಗ್ರೆಸ್ ಪಕ್ಷದ ಸಕ್ರಿಯ ಕಾರ್ಯಕರ್ತರಾಗಿ ಹಾಗೂ ಕೆಪಿಸಿಸಿ ಉಪಾಧ್ಯಕ್ಷರಾಗಿ ಪಕ್ಷದ ಶಿಸ್ತಿನ ಸಿಪಾಯಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಅವರಿಗೆ ವಿಧಾನಪರಿಷತ್ ಸದಸ್ಯ ಸ್ಥಾನ ನೀಡುವುದರ ಜೊತೆಗೆ ಕ್ಯಾಬಿನೆಟ್ ದರ್ಜೆಯ ಸಚಿವರನ್ನಾಗಿ ನೇಮಕ ಮಾಡಬೇಕು. ರಾಜ್ಯದಲ್ಲಿರುವ 40 ಲಕ್ಷಕ್ಕೂ ಹೆಚ್ಚು ಜನಸಂಖ್ಯೆಯ ಮಾದಿಗ ಸಮಾಜಕ್ಕೆ ಹೆಚ್. ಆಂಜನೇಯ ಅವರು ಆಶಾಕಿರಣವಾಗಿದ್ದು, ಸಂಪುಟ ಪುನರ್‌ರಚನೆಯಲ್ಲಿ ಅವರಿಗೆ ಪ್ರಾತಿನಿಧ್ಯ ನೀಡಬೇಕು ಎಂದು ಕರ್ನಾಟಕ ರಾಜ್ಯ ಮಾದಿಗ ಮಹಾಸಭಾದ ಉಪಾಧ್ಯಕ್ಷರಾದ ಮೋಹನ ಎಸ್. ಆಲಮೇಲಕರ, ಎಚ್.ಡಿ. ಪೂಜಾರ, ಡಿ.ಜಿ. ಪೂಜಾರ, ಮರಿಯಪ್ಪ ಸಿದ್ದಣ್ಣನವರ, ಸತೀಶ ಪಾಸಿ ಸೇರಿದಂತೆ ಪದಾಧಿಕಾರಿಗಳು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಪತ್ರಿಕಾ ಹೇಳಿಕೆ ಮೂಲಕ ಒತ್ತಾಯಿಸಿದ್ದಾರೆ.

## ಹಿಂದುಳಿದ ಸಮುದಾಯಗಳ ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್ ಘೋಷಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಗಂಗಾ ಮತಸ್ಥರು ಹಾಗೂ ಅಂಬಿಗೇರ, ಬಾರಕೇರ, ಸುಣಗಾರ, ಕಬ್ಬೇರ, ಬೆಸ್ತ ಸೇರಿದಂತೆ 39 ಪರ್ಯಾಯ ಪದಗಳನ್ನು ಹೊಂದಿರುವ ಸಮುದಾಯಗಳ ಅಭಿವೃದ್ಧಿಗೆ ಸರ್ಕಾರ ವಿಶೇಷ ಯೋಜನೆಗಳನ್ನು ರೂಪಿಸಬೇಕು ಎಂದು ಯುವನಾಯಕ ಸಮುದಾಯದ ಪ್ರಧಾನ ಕಾರ್ಯದರ್ಶಿ ಹಾಗೂ ಗಂಗಾಮತಸ್ಥ ನೌಕರರ ಸಂಘದ ರಾಜ್ಯ ನಿರ್ದೇಶಕ ಸಂಗಮೇಶ ಹಾದಿಮನಿ ಆಗ್ರಹಿಸಿದ್ದಾರೆ.



ಗದಗ ಜಿಲ್ಲೆಯಲ್ಲಿ ಗಂಗಾಮತ ಹಾಗೂ ಸಂಬಂಧಿತ ಸಮುದಾಯಗಳ ಜನಸಂಖ್ಯೆ ಅಪಾರವಾಗಿದ್ದು, ನಗರ ಪ್ರದೇಶಗಳಲ್ಲಿ ನೂರಾರು ಬಡ ಕುಟುಂಬಗಳು ಬಾಡಿಗೆ ಮನೆಗಳಲ್ಲಿ ವಾಸಿಸುತ್ತಿವೆ. ಈ ಸಮುದಾಯಗಳು ಸಾಮಾಜಿಕವಾಗಿ, ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಹಿಂದುಳಿದ ಸ್ಥಿತಿಯಲ್ಲಿವೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಬಡತನದ ಕಾರಣಕ್ಕೆ ಮಕ್ಕಳ ಶಿಕ್ಷಣ ಕುಂಠಿತಗೊಳ್ಳಬಾರದು. ಸರ್ಕಾರ ಹಿಂದುಳಿದ ಸಮುದಾಯಗಳ ಅಭಿವೃದ್ಧಿಗೆ ಹೊಸ ಯೋಜನೆಗಳನ್ನು ರೂಪಿಸಿ ಸಮಾನತೆಯಿಂದ ಬದುಕಲು ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಸಮುದಾಯದ ಮೂಲ ವೃತ್ತಿಗಳಿಗೆ ಉತ್ತೇಜನ ನೀಡುವ ಮೂಲಕ ಸಾಲ-ಸೌಲಭ್ಯಗಳನ್ನು ಒದಗಿಸಬೇಕು. ಕಡುಬಡತನದಲ್ಲಿರುವ ಕುಟುಂಬಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡುವುದರ ಮೂಲಕ ಶಿಕ್ಷಣ ಕ್ರಾಂತಿಗೆ ಸರ್ಕಾರ ಮುಂದಾಗಬೇಕು ಎಂದು ಅವರು ಆಗ್ರಹಿಸಿದ್ದಾರೆ.

### ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟಕ್ಕೆ ಕಡಿವಾಣ ಹಾಕುವಂತೆ ರೈತ ಸಂಘ ಹಸಿರು ಸೇನೆ ಆಗ್ರಹ

## ಗುಣಮಟ್ಟದ ಬೀಜ-ಗೊಬ್ಬರ ಪೂರೈಕೆ ಮಾಡಿ



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಮುಂಗಾರು ಬಿತ್ತನೆ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ಹಾಗೂ ರಾಸಾಯನಿಕ ಗೊಬ್ಬರವನ್ನು ಸಕಾಲದಲ್ಲಿ ಪೂರೈಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ನೇತೃತ್ವದಲ್ಲಿ ತಾಲೂಕು ಆಡಳಿತಕ್ಕೆ ಮನವಿ ಸಲ್ಲಿಸಲಾಯಿತು.

ಪಟ್ಟಣದ ತಾಲೂಕು ಆಡಳಿತ ಸೌಧದಲ್ಲಿ ಉಪ ತಹಸೀಲ್ದಾರ್ ಶಿವಕುಮಾರ್ ಗೌಡ ಅವರಿಗೆ ಮನವಿ ಸಲ್ಲಿಸಿದ ರೈತ ಸಂಘದ ತಾಲೂಕು ಅಧ್ಯಕ್ಷ ಜಿ. ರಮೇಶ್ ಮಾತನಾಡಿ, "ಮುಂಗಾರು ಮಳೆ ಆರಂಭವಾಗಿದ್ದು, ರೈತರು ಬಿತ್ತನೆ ಕಾರ್ಯಕ್ಕೆ ಸಜ್ಜಾಗಿದ್ದಾರೆ. ಆದರೆ ಉತ್ತಮ ಗುಣಮಟ್ಟದ ಬೀಜ ಮತ್ತು ರಾಸಾಯನಿಕ ಗೊಬ್ಬರ ಕೊರತೆಯ ಆತಂಕ ಎದುರಾಗಿದೆ. ರೈತರಿಗೆ ಯಾವುದೇ ತೊಂದರೆ ಆಗದಂತೆ ಸರ್ಕಾರ ಅಗತ್ಯ ಪ್ರಮಾಣದಲ್ಲಿ ಗೊಬ್ಬರ ಹಾಗೂ ಬೀಜ ಪೂರೈಸಬೇಕು" ಎಂದು ಆಗ್ರಹಿಸಿದರು.

> "ಬಿತ್ತನೆ ಸಮಯದಲ್ಲಿ ರೈತರಿಗೆ ಬೀಜ-ಗೊಬ್ಬರ ಸಿಗದಿದ್ದರೆ ಕೃಷಿ ಚಟುವಟಿಕೆ ಸಂಪೂರ್ಣ ಹಿನ್ನಡೆಯಾಗುತ್ತದೆ. ಸರ್ಕಾರ ರೈತರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕು"
>
> – ಜಿ. ರಮೇಶ್

ರಸಗೊಬ್ಬರಗಳ ಬೆಲೆ ಗಗನಕ್ಕೇರಿರುವುದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಕಾಳಸಂತೆಯಲ್ಲಿ ನಡೆಯುತ್ತಿರುವ ರಸಗೊಬ್ಬರ ಮಾರಾಟವನ್ನು ಕಟ್ಟುನಿಟ್ಟಾಗಿ ತಡೆಗಟ್ಟಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಗೌರವ ಅಧ್ಯಕ್ಷ ದುರುಗಪ್ಪ, ಹೋಬಳಿ ಅಧ್ಯಕ್ಷ ಮಲ್ಲಿಕಾರ್ಜುನ್, ಪರಶುರಾಮಪ್ಪ, ರುದ್ರಗೌಡ, ಉಮ್ಮಣ್ಣ ಗೌಡ್ರು, ತಳವಾರ್ ಉಮ್ಮಣ್ಣ, ಮದ್ದಾನಪ್ಪ, ರಾಮಣ್ಣ, ಕೃಷ್ಣಾರೆಡ್ಡಿ, ಮಲ್ಲಪ್ಪ, ದುರುಗಪ್ಪ ಸೇರಿದಂತೆ ಹಲವಾರು ರೈತರು ಉಪಸ್ಥಿತರಿದ್ದರು.

### ಕಡಿಮೆ ವೆಚ್ಚದಲ್ಲಿ ಹೆಚ್ಚು ಇಳುವರಿ-ರೋಗರಹಿತ ಬಾಳೆ ಬೇಸಾಯಕ್ಕೆ ರೈತರಿಗೆ ತೋಟಗಾರಿಕೆ ಇಲಾಖೆಯ ಕರೆ

# ಟಿಶ್ಯೂ ಕಲ್ಚರ್ ಬಾಳೆ ಬೆಳೆದರೆ ಲಾಭ ಡಬಲ್!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಬಾಳೆ ಉತ್ಪಾದನೆಯನ್ನು ಹೆಚ್ಚಿಸುವ ಉದ್ದೇಶದಿಂದ ಸಾಂಪ್ರದಾಯಿಕ ಬಾಳೆ ಕಂದುಗಳ ಬದಲಿಗೆ ವೈಜ್ಞಾನಿಕ ತಂತ್ರಜ್ಞಾನದ ಅಂಗಾಂಶ ಕೃಷಿ (ಟಿಶ್ಯೂ ಕಲ್ಚರ್) ಬಾಳೆ ಸಸಿಗಳನ್ನು ಬಳಸುವಂತೆ ತೋಟಗಾರಿಕೆ ಇಲಾಖೆ ರೈತರಿಗೆ ಕರೆ ನೀಡಿದೆ.

ದೇಶದಲ್ಲಿ ವಾರ್ಷಿಕವಾಗಿ ಸುಮಾರು 9 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ 383 ಲಕ್ಷ ಮೆಟ್ರಿಕ್ ಟನ್ ಬಾಳೆ ಉತ್ಪಾದನೆಯಾಗುತ್ತಿದ್ದು, ಪ್ರತಿ ಹೆಕ್ಟೇರ್‌ಗೆ ಸರಾಸರಿ 42 ಮೆಟ್ರಿಕ್ ಟನ್ ಉತ್ಪಾದನೆ ದಾಖಲಾಗುತ್ತಿದೆ. ಆದರೆ ಕರ್ನಾಟಕದಲ್ಲಿ 46 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಕೇವಲ 12 ಲಕ್ಷ ಮೆಟ್ರಿಕ್ ಟನ್ ಬಾಳೆ ಉತ್ಪಾದನೆಯಾಗುತ್ತಿದ್ದು, ಪ್ರತಿ ಹೆಕ್ಟೇರ್‌ಗೆ ಕೇವಲ 26 ಮೆಟ್ರಿಕ್ ಟನ್ ಉತ್ಪಾದನೆ ಮಾತ್ರ ಸಿಗುತ್ತಿದೆ. ಇದು ರಾಷ್ಟ್ರೀಯ ಸರಾಸರಿಗಿಂತ ಗಣನೀಯವಾಗಿ ಕಡಿಮೆ ಎಂದು ಇಲಾಖೆ ತಿಳಿಸಿದೆ.

ರೈತರು ಇನ್ನೂ ಹಳೆಯ ಸಾಂಪ್ರದಾಯಿಕ ಬಾಳೆ ಕಂದುಗಳನ್ನು ಬಳಸುತ್ತಿರುವುದೇ ಕಡಿಮೆ ಉತ್ಪಾದಕತೆಗೆ ಪ್ರಮುಖ ಕಾರಣವಾಗಿದೆ ಎಂದು ಇಲಾಖೆ ಅಭಿಪ್ರಾಯಪಟ್ಟಿದೆ.

**ಅಂಗಾಂಶ ಕೃಷಿ ಬಾಳೆ ಸಸಿಗಳ ದರ**

- ಎಕ್ಸ್ ಅಗಾರ್ ಹಂತದ ಸಸಿ – ಪ್ರತಿ ಸಸಿಗೆ ರೂ. 6
- 98 ಕ್ಯಾವಿಟಿಯ ಪ್ರೋಟ್ರೇ ಸಸಿ – ಪ್ರತಿ ಸಸಿಗೆ ರೂ. 7
- 4"x6" ಪಾಲಿಬ್ಯಾಗ್ ಸಸಿ – ಪ್ರತಿ ಸಸಿಗೆ ರೂ. 12




**ಅಂಗಾಂಶ ಕೃಷಿ ಸಸಿಗಳೇನು ವಿಶೇಷ?**

ತೋಟಗಾರಿಕೆ ಇಲಾಖೆಯ ಪ್ರಕಾರ, ಅಂಗಾಂಶ ಕೃಷಿ ಬಾಳೆ ಸಸಿಗಳು ಪ್ರಯೋಗಾಲಯದ ನಿಯಂತ್ರಿತ ವಾತಾವರಣದಲ್ಲಿ ಸಿದ್ಧಗೊಳ್ಳುವುದರಿಂದ ಸಂಪೂರ್ಣ ರೋಗರಹಿತ ಹಾಗೂ ಆರೋಗ್ಯಕರವಾಗಿರುತ್ತವೆ. ಸಾಂಪ್ರದಾಯಿಕ ಬಾಳೆ ಕಂದುಗಳಲ್ಲಿ ರೋಗ ಮತ್ತು ಕೀಟಗಳ ಹರಡುವಿಕೆ ಹೆಚ್ಚಾಗುವ ಸಾಧ್ಯತೆ ಇದ್ದರೆ, ಟಿಶ್ಯೂ ಕಲ್ಚರ್ ಸಸಿಗಳಲ್ಲಿ ಗಿಡಗಳ ಜೀವಂತಿಕೆ ಪ್ರಮಾಣವೂ ಹೆಚ್ಚು ಇರುತ್ತದೆ.

**ಒಂದೇ ಸಮಯದಲ್ಲಿ ಕೊಯ್ಲು**

ಸಾಮಾನ್ಯ ಬಾಳೆ ಕಂದುಗಳಲ್ಲಿ ಗಿಡಗಳ ಬೆಳವಣಿಗೆ ಅಸಮಾನವಾಗಿರುವುದರಿಂದ ಕೊಯ್ಲು ಕೂಡ ಬೇರೆ ಬೇರೆ ಸಮಯದಲ್ಲಿ ಬರುತ್ತದೆ. ಆದರೆ ಅಂಗಾಂಶ ಕೃಷಿ ಸಸಿಗಳು ಒಂದೇ ಸಮನಾಗಿ ಬೆಳೆಯುವುದರಿಂದ ಇಡೀ ತೋಟದ ಬೆಳೆ ಒಂದೇ ಸಮಯದಲ್ಲಿ ಕೊಯ್ಲಿಗೆ ಬರುತ್ತದೆ. ಇದು ಮಾರುಕಟ್ಟೆ ನಿರ್ವಹಣೆಗೆ ರೈತರಿಗೆ ಅನುಕೂಲಕರವಾಗಿದೆ.

**ಹೆಚ್ಚು ಇಳುವರಿ, ಉತ್ತಮ ಗುಣಮಟ್ಟ**

ಅಂಗಾಂಶ ಕೃಷಿ ಬಾಳೆ ಸಸಿಗಳಲ್ಲಿ ಹೆಚ್ಚಿನ ಹಾಗೂ ಸ್ಥಿರ ಇಳುವರಿ ದೊರೆಯುತ್ತದೆ. ಹಣ್ಣುಗಳು ಗಾತ್ರದಲ್ಲಿ ದೊಡ್ಡದಾಗಿದ್ದು, ಒಂದೇ ಮಾದರಿಯ ಆಕಾರ ಮತ್ತು ಉತ್ತಮ ಗುಣಮಟ್ಟ ಹೊಂದಿರುತ್ತವೆ. ಸಾಂಪ್ರದಾಯಿಕ ಕಂದುಗಳಲ್ಲಿ ಇಳುವರಿ ಕಡಿಮೆಯಾಗುವುದರ ಜೊತೆ-ಗೆ ಹಣ್ಣಿನ ಗಾತ್ರ ಮತ್ತು ಗುಣಮಟ್ಟದಲ್ಲೂ ವ್ಯತ್ಯಾಸ ಕಂಡುಬರುತ್ತದೆ.

**ನೀರು-ಗೊಬ್ಬರ ಉಳಿತಾಯ**

ಸಾಂಪ್ರದಾಯಿಕ ಬೇಸಾಯದಲ್ಲಿ ನೀರು ಮತ್ತು ಗೊಬ್ಬರ ವ್ಯರ್ಥವಾಗುವ ಸಾಧ್ಯತೆ ಹೆಚ್ಚಿದ್ದರೆ, ಅಂಗಾಂಶ ಕೃಷಿಯಲ್ಲಿ ನೀರು ಹಾಗೂ ಗೊಬ್ಬರ ಸಮರ್ಪಕವಾಗಿ ಬಳಕೆಯಾಗುತ್ತದೆ. ರೋಗದ ಪ್ರಮಾಣ ಕಡಿಮೆ ಇರುವುದರಿಂದ ನಿರ್ವಹಣೆಯೂ ಸುಲಭವಾಗುತ್ತದೆ ಎಂದು ಇಲಾಖೆ ವಿವರಿಸಿದೆ.

**ರೈತರಿಗೆ ತೋಟಗಾರಿಕೆ ಇಲಾಖೆಯ ಎಚ್ಚರಿಕೆ**

"ರೈತರು ಖಾಸಗಿ ವ್ಯಕ್ತಿಗಳ ಮೋಸಕ್ಕೆ ಒಳಗಾಗದೆ ಇಲಾಖೆಯ ಅಧಿಕೃತ ಹಾಗೂ ವಿಶ್ವಾಸಾರ್ಹ ಕೇಂದ್ರಗಳಿಂದಲೇ ರೋಗರಹಿತ ಅಂಗಾಂಶ ಕೃಷಿ ಬಾಳೆ ಸಸಿಗಳನ್ನು ಖರೀದಿಸಿ ಹೆಚ್ಚಿನ ಲಾಭ ಪಡೆಯಬೇಕು."

**ಆರಂಭದಲ್ಲಿ ವೆಚ್ಚ ಹೆಚ್ಚು... ಆದರೆ ಲಾಭವೂ ಹೆಚ್ಚು**

ಟಿಶ್ಯೂ ಕಲ್ಚರ್ ಸಸಿಗಳ ಆರಂಭಿಕ ವೆಚ್ಚ ಸ್ವಲ್ಪ ಹೆಚ್ಚಿದ್ದರೂ, ದೀರ್ಘಾವಧಿಯಲ್ಲಿ ಕಾರ್ಮಿಕ ವೆಚ್ಚ ಕಡಿಮೆಯಾಗುವುದು, ಉತ್ತಮ ಇಳುವರಿ ದೊರೆಯುವುದು ಹಾಗೂ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಸಿಗುವುದರಿಂದ ರೈತರಿಗೆ ಹೆಚ್ಚಿನ ಲಾಭ ದೊ-ರೆಯುತ್ತದೆ ಎಂದು ಇಲಾಖೆ ತಿಳಿಸಿದೆ.

ಉತ್ತಮ ಗುಣಮಟ್ಟದ ರೋಗರಹಿತ ಅಂಗಾಂಶ ಕೃಷಿ ಬಾಳೆ ಸಸಿಗಳನ್ನು ಬೆಂಗಳೂರಿನ ರಾಯಲ್ ಮೀನಾಕ್ಷಿ ಮಾಲ್ ಎದುರಿನ ಜೈವಿಕ ಕೇಂದ್ರ, ಹುಳಿಮಾವು ಇಲ್ಲಿ ನ್ಯಾಯೋಚಿತ ದರದಲ್ಲಿ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಅಧಿಕಾರಿಗಳನ್ನು 7975736459 ಅಥವಾ 9880234281 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

---

### ಬಿಜೆಪಿ ಸರ್ಕಾರದ ಪ್ರತೀಕಾರ ರಾಜಕಾರಣಕ್ಕೆ ತನಿಖಾ ಸಂಸ್ಥೆಗಳ ಬಳಕೆಯ ವಿರುದ್ಧ ವಾಗ್ದಾಳಿ

## ಪಿಣರಾಯಿ ಮನೆ ಮೇಲೆ ಇ.ಡಿ ದಾಳಿ ಖಂಡಿಸಿ ಸಿಪಿಐ(ಎಂ) ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕೇರಳದ ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ವಿರೋಧ ಪಕ್ಷದ ನಾಯಕರಾದ ಪಿಣರಾಯಿ ವಿಜಯನ್ ಅವರ ನಿವಾಸದ ಮೇಲೆ ನಡೆದ ಇ.ಡಿ ದಾಳಿಯನ್ನು ಖಂಡಿಸಿ ಸಿಪಿಐ(ಎಂ) ಪಕ್ಷದ ತಾಲೂಕು ಸಮಿತಿಯಿಂದ ಶನಿವಾರ ಪಟ್ಟಣದ ಬಸವೇಶ್ವರ ವೃತ್ತದ ಬಳಿ ಭಾರಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಕಾರ್ಯಕರ್ತರು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. "ಇ.ಡಿ ದಾಳಿ ಎಂಬುದು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ರಾಜಕೀಯ ಪ್ರತೀಕಾರದ ಭಾಗ. ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದ ಒಂದೇ ತಿಂಗಳೊಳಗೆ ಪಿಣರಾಯಿ ವಿಜಯನ್ ನಿವಾಸದ ಮೇಲೆ ದಾಳಿ ನಡೆಸಿರುವುದು ವಿರೋಧ ಪಕ್ಷದ ನಾಯಕರನ್ನು ಬೆದರಿಸುವ ಉದ್ದೇಶವನ್ನೇ ಸ್ಪಷ್ಟಪಡಿಸುತ್ತದೆ" ಎಂದು ಆರೋಪಿಸಿದರು.

ಎಕ್ಸಲಾಜಿಕ್ ಪ್ರಕರಣಕ್ಕೂ ಪಿಣರಾಯಿ ವಿಜಯನ್ ಅವರಿಗೂ ಯಾವುದೇ ಸಂಬಂಧವಿಲ್ಲ ಎಂದು ನ್ಯಾಯಾಲಯಗಳು ಹಲವು ಬಾರಿ ಗಮನಿಸಿದರೂ, ರಾಜಕೀಯ ಬೇಟೆ ಮಾತ್ರ ನಿರಂತರವಾಗಿ ಮುಂದುವರಿಯುತ್ತಿದೆ ಎಂದು ಪ್ರತಿಭಟನಾಕಾರರು ಕಿಡಿಕಾರಿದರು.




ಕೇರಳದ ಮುಖ್ಯಮಂತ್ರಿ ವಿ.ಡಿ. ಸತೀಶನ್ ಅವರು ದೆಹಲಿಯಲ್ಲಿ ಪ್ರಧಾನಮಂತ್ರಿಯನ್ನು ಭೇಟಿ ಮಾಡಿದ ತಕ್ಷಣವೇ ಈ ದಾಳಿ ನಡೆದಿರುವುದು ಹಲವು ಗಂಭೀರ ಅನುಮಾನಗಳಿಗೆ ಕಾರಣವಾಗಿದೆ ಎಂದು ಮುಖಂಡರು ಆರೋಪಿಸಿದರು.

ರಾಜ್ಯದಲ್ಲಿ ಯುಡಿಎಫ್ ಸರ್ಕಾರ ಅಧಿಕಾರಕ್ಕೆ ಬಂದ ಕೆಲವೇ ದಿನಗಳಲ್ಲಿ ಇಂತಹ ಕ್ರಮಗಳು ಜರುಗುತ್ತಿರುವುದು ಪ್ರಜಾಪ್ರಭುತ್ವಕ್ಕೆ ಅಪಾಯಕಾರಿ ಬೆಳವಣಿಗೆ. ಕೇರಳದಲ್ಲಿ ಜನರು ಈಗಾಗಲೇ ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿದ್ದು, ದೇಶದಾದ್ಯಂತ ಇದರ ವಿರುದ್ಧ ಆಕ್ರೋಶ ವ್ಯಕ್ತವಾಗುತ್ತಿದೆ ಎಂದು ಹೇಳಿದರು.

"ರಾಜಕೀಯ ವಿರೋಧಿಗಳನ್ನು ಮಣಿಸಲು ತನಿಖಾ ಸಂಸ್ಥೆಗಳನ್ನು ಬಳಸುವುದು ಪ್ರಜಾಪ್ರಭುತ್ವದ ಮೌಲ್ಯಗಳ ಮೇಲಿನ ನೇರ ದಾಳಿ"

– ಬಿ. ಮಾಳಮ್ಮ

ಕೇಂದ್ರ ಸರ್ಕಾರದ ಜನವಿರೋಧಿ, ನವ ಉದಾರವಾದಿ ಹಾಗೂ ದಮನಕಾರಿ ನೀತಿಗಳ ವಿರುದ್ಧ ಜನಸಾಮಾನ್ಯರ ಧ್ವನಿಯನ್ನು ಸಿಪಿಐ(ಎಂ) ಪಕ್ಷ ಸದಾ ರಕ್ಷಿಸಲಿದೆ. ಜನಪರ ಹೋರಾಟ ಮುಂದುವರಿಯಲಿದೆ ಎಂದು ಪ್ರತಿಭಟನಾಕಾರರು ಘೋಷಿಸಿದರು.

ಪ್ರತಿಭಟನೆಯ ನೇತೃತ್ವವನ್ನು ತಾಲೂಕು ಕಾರ್ಯದರ್ಶಿ ಬಿ. ಮಾಳಮ್ಮ ವಹಿಸಿದ್ದರು. ತಾಲೂಕು ಸಮಿತಿ ಮುಖಂಡರಾದ ಎಸ್. ಜಗನ್ನಾಥ, ಕೆ. ರಮೇಶ್, ಜಿ. ರಮೇಶ್, ಕೆ. ರಾಮಣ್ಣ, ಸರ್ದಾರ್ ಹುಲಿಗೆಮ್ಮ, ಬಿ. ಮೈಲಮ್ಮ, ತಟ್ನಮ್ಮ, ರಂಗಪ್ಪ ದಾಸರ, ಕೂಟಗಿ ಮಲ್ಲಿಕಾರ್ಜುನ, ದುರುಗಮ್ಮ ಸೇರಿದಂತೆ ಹಲವರು ಭಾಗವಹಿಸಿದ್ದರು.

---

## ಉಪನಿರ್ದೇಶಕಿ ರಾಧಾ ಮಣ್ಣೂರ ಅವರಿಗೆ ಸನ್ಮಾನ




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಶ್ರೀಮತಿ ರಾಧಾ ಮಣ್ಣೂರ ಅವರನ್ನು ಗದಗ ಜಿಲ್ಲೆಯ ಅಂಬಿಗರ ಸಮಾಜ ಸಂಘಟನೆಯ ಪ್ರಧಾನ ಕಾರ್ಯದರ್ಶಿ ಹಾಗೂ ಗದಗ ತಾಲೂಕು ಪಂಚ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಸದಸ್ಯ ಸಂಗಮೇಶ ಹಾದಿಮನಿ ಸನ್ಮಾನಿಸಿದರು.

ಈ ವೇಳೆ ಮಾತನಾಡಿದ ಸಂಗಮೇಶ ಹಾದಿಮನಿ, ರಾಧಾ ಮಣ್ಣೂರ ಅವರು ಉಪನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಅವರಿಗೆ ಇನ್ನೂ ಉನ್ನತ ಹುದ್ದೆಗಳು ದೊರೆಯಲಿ ಎಂದು ಶುಭ ಹಾರೈಸಿದರು.

ಕೆಪಿಸಿಸಿ ಮೀನುಗಾರರ ವಿಭಾಗದ ಜಿಲ್ಲಾಧ್ಯಕ್ಷ ಗುರಪ್ಪ ತಿರ್ಲಾಪೂರ ಮಾತನಾಡಿ, ಸಮುದಾಯದ ಮಕ್ಕಳ ಶೈಕ್ಷಣಿಕ ಹಾಗೂ ಸಾಮಾಜಿಕ ಪ್ರಗತಿಗೆ ರಾಧಾ ಮಣ್ಣೂರ ಅವರ ಮಾರ್ಗದರ್ಶನ ಅಗತ್ಯವಾಗಿದೆ ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ರಾಧಾ ಮಣ್ಣೂರ, ಮಕ್ಕಳಿಗೆ ಆಸ್ತಿ ಮಾಡುವ ಬದಲು ಉತ್ತಮ ಶಿಕ್ಷಣ ನೀಡಬೇಕು. ನಿರಂತರ ಅಧ್ಯಯನದಿಂದ ಮಾತ್ರ ಸಾಧನೆ ಸಾಧ್ಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಮೀನುಗಾರರ ಸಂಘದ ಗದಗ ತಾಲೂಕು ಅಧ್ಯಕ್ಷ ಹರೀಶ ಬಾರಕೇರ, ರಾಜು ಪೂಜಾರ, ರವಿ ಗುಡಿಸಾಗರ ಹಾಗೂ ಸಮುದಾಯದ ಯುವಕರು ಉಪಸ್ಥಿತರಿದ್ದರು.

---

## ಶಿಸ್ತು, ಸಮಯ ಪಾಲನೆಯಿಂದ ಯಶಸ್ಸು ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಇನ್‌ಸೈಟ್ ಅಕಾಡೆಮಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಬೇಸಿಗೆ ಶಿಬಿರದ ಸಮಾರೋಪ ಹಾಗೂ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವು ಮೇ 29ರಂದು ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮೈಲಾರಪ್ಪ ಮೆಣಸಗಿ ಪದವಿ ಕಾಲೇಜಿನ ಪ್ರಾಚಾರ್ಯರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ವಿದ್ಯಾರ್ಥಿ ಜೀವನ ಅತ್ಯಂತ ಮಹತ್ವದ ಘಟ್ಟವಾಗಿದ್ದು, ಈ ಹಂತದಲ್ಲಿ ಶಿಸ್ತು ಮತ್ತು ಸಮಯ ಪಾಲನೆ ರೂಢಿಸಿಕೊಳ್ಳುವುದು ಅಗತ್ಯವಾಗಿದೆ ಎಂದು ಹೇಳಿದರು.

ಸಮಯವನ್ನು ಸರಿಯಾಗಿ ಸದ್ಬಳಕೆ ಮಾಡಿಕೊಂಡ ವಿದ್ಯಾರ್ಥಿಗಳು ಮಾತ್ರ ಜೀವನದಲ್ಲಿ ಉನ್ನತ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಅವರು ತಿಳಿಸಿದರು.




ಮುಂದುವರಿದು ಮಾತನಾಡಿದ ಅವರು, ಜೀವನದಲ್ಲಿ ಏರಿಳಿತಗಳನ್ನು ಎದುರಿಸಲು ಸಂಯಮ ಮತ್ತು ಸ್ಪಷ್ಟ ಗುರಿ ಅಗತ್ಯವಾಗಿದೆ. ವಿದ್ಯಾರ್ಥಿಗಳು ತಮ್ಮ ಭವಿಷ್ಯ ರೂಪಿಸಿಕೊಳ್ಳಲು ಇವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಆದಿಯೋಗಿ ಎಜುಕೇಶನಲ್ ಟ್ರಸ್ಟ್ ಅಧ್ಯಕ್ಷ ಶ್ರೀಕಾಂತ್‌ಗೌಡ ಪಾಟೀಲ್, ಕಾರ್ಯದರ್ಶಿ ಪವನ್‌ಕುಮಾರ್ ಶೇಠ್ ಹಾಗೂ ಖಜಾಂಚಿ ಕೆ.ಎಂ. ರಾಥೋಡ್ ಉಪಸ್ಥಿತರಿದ್ದರು.

ಇನ್‌ಸೈಟ್ ಅಕಾಡೆಮಿಯ ಪದಾಧಿಕಾರಿಗಳು, ಶಿಕ್ಷಕ ವೃಂದ, ಪಾಲಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಬೇಸಿಗೆ ಶಿಬಿರದಲ್ಲಿ ಪಾಲ್ಗೊಂಡಿದ್ದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಲಾಯಿತು.


---

## ಹೊಳೆಆಲೂರು ಆಸ್ಪತ್ರೆಗೆ ಮೂಲಸೌಕರ್ಯ ಕಲ್ಪಿಸಿ

■ವಿಜಯಸಾಕ್ಷಿ ಸುದ್ದಿ, ಹೊಳೆಆಲೂರು

ಹೊಳೆಆಲೂರು ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಭವನದಲ್ಲಿ ವೈದ್ಯಾಧಿಕಾರಿಗಳ ಕೊರತೆ, ಸಮರ್ಪಕ ಔಷಧಿ ಹಾಗೂ ಮೂಲಸೌಕರ್ಯಗಳ ಅಭಾವ ಇರುವುದನ್ನು ಯುವ ಕರ್ನಾಟಕ ವೇದಿಕೆ ಖಂಡಿಸಿದೆ.

ಯುವ ಕರ್ನಾಟಕ ವೇದಿಕೆಯ ಗದಗ ಜಿಲ್ಲಾ ಅಧ್ಯಕ್ಷ ಎಂ.ಎಚ್. ನದಾಫ್ ಮಾತನಾಡಿ, ಹೊಳೆಆಲೂರು ಸರ್ಕಾರಿ ಆಸ್ಪತ್ರೆ ಸುತ್ತಮುತ್ತಲಿನ 21 ಗ್ರಾಮಗಳ ಜನರಿಗೆ ಪ್ರಮುಖ ಆಸ್ಪತ್ರೆಯಾಗಿದ್ದು, ಪ್ರತಿನಿತ್ಯ 100ರಿಂದ 150 ರವರೆಗೆ ಓಪಿಡಿ ನಡೆಯುತ್ತದೆ. ಆದರೆ ಇಲ್ಲಿ ಒಬ್ಬರೇ ವೈದ್ಯಾಧಿಕಾರಿಗಳು ಕಾರ್ಯನಿರ್ವಹಿಸುತ್ತಿರುವುದು ದುರ್ದೈವದ ಸಂಗತಿ ಎಂದು ಹೇಳಿದರು.



ಹೆರಿಗೆ ಸೇರಿದಂತೆ ವಿವಿಧ ಚಿಕಿತ್ಸೆಗಳಿಗಾಗಿ ಗ್ರಾಮೀಣ ಭಾಗದ ಜನರು ಆಸ್ಪತ್ರೆಗೆ ಬರುತ್ತಿದ್ದರೂ ಸಮರ್ಪಕ ವೈದ್ಯರು, ಸ್ಟಾಫ್ ನರ್ಸ್‌ಗಳು, ಔಷಧಿಗಳು ಹಾಗೂ ಲಸಿಕೆಗಳ ಕೊರತೆಯಿಂದ ಸಾರ್ವಜನಿಕರು ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ಆರೋಪಿಸಿದರು.

ಸುಮಾರು ಆರು ತಿಂಗಳ ಹಿಂದೆ ಸಮುದಾಯ ಆರೋಗ್ಯ ಭವನ ಉದ್ಘಾಟನೆಗೊಂಡಿದ್ದರೂ ಸಮರ್ಪಕ ಚಿಕಿತ್ಸೆ ವ್ಯವಸ್ಥೆ ಆರಂಭವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸ್ಥಳೀಯ ಶಾಸಕರು ಹಾಗೂ ಸಂಬಂಧಪಟ್ಟ ಜಿಲ್ಲೆ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ತಕ್ಷಣ ಗಮನಹರಿಸಿ ಆಸ್ಪತ್ರೆಯಲ್ಲಿ ಅಗತ್ಯ ಸೌಲಭ್ಯ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಮನವಿಗೆ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಗ್ರಾಮಸ್ಥರೊಂದಿಗೆ ಆಸ್ಪತ್ರೆ ಎದುರು ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಯುವ ಕರ್ನಾಟಕ ವೇದಿಕೆಯ ಜಿಲ್ಲಾ ಉಪಾಧ್ಯಕ್ಷ ಬಸವರಾಜ ಹಾದಿಮನಿ, ನಿಂಗಪ್ಪ ಹಾದಿಮನಿ, ಮಾರುತಿ, ಶರೀಫ್ ನದಾಫ್, ರಾಜು ಹೊಂಬಾಳ, ಬಾಬು ಕಾತರಕಿ, ನಯಿಮ್ ನದಾಫ್, ನಿಯಾಜ್ ಮುಲ್ಲಾ, ಹನುಮಂತ ಗಾಡಗೋಳಿ, ಅಶೋಕ್ ಮುಂದಿನಮನಿ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

---

## ಮಳೆಯಲ್ಲೂ ಮಾನವೀಯತೆ ಮೆರೆದ ಪೇದೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ಸುರಿದ ಧಾರಾಕಾರ ಮಳೆ ಜನಜೀವನವನ್ನು ಅಸ್ತವ್ಯಸ್ತಗೊಳಿಸಿದ್ದರೂ, ಇದೇ ವೇಳೆ ಬೆಂಗಳೂರು ಪೊಲೀಸರ ಮಾನವೀಯತೆ ಸಾರ್ವಜನಿಕರ ಮನಗೆದ್ದಿದೆ.

ಮಳೆಯಿಂದ ಜಲಾವೃತಗೊಂಡ ರಸ್ತೆಯಲ್ಲಿ ರಸ್ತೆ ದಾಟಲು ಪರದಾಡುತ್ತಿದ್ದ ವಿಕಲಚೇತನ ಯುವಕನನ್ನು ಬ್ಯಾಟರಾಯನಪುರ ಪೊಲೀಸ್ ಠಾಣೆಯ ಕಾನ್ಸ್‌ಟೇಬಲ್ ಅನಿಲ್ ಅವರು ತಮ್ಮ ಹೆಗಲ ಮೇಲೆ ಹೊತ್ತು ಸುರಕ್ಷಿತವಾಗಿ ರಸ್ತೆ ದಾಟಿಸಿದರು.

ನಗರದಲ್ಲಿ ಕಳೆದ ಕೆಲವು ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದ ಹಲವೆಡೆ ರಸ್ತೆಗಳು ನೀರಿನಿಂದ ತುಂಬಿ ಸಾರ್ವಜನಿಕ ಸಂಚಾರಕ್ಕೆ ತೊಂದರೆ ಉಂಟಾಗಿತ್ತು.

ಇಂತಹ ಸಂಕಷ್ಟದ ಪರಿಸ್ಥಿತಿಯಲ್ಲೂ ಕರ್ತವ್ಯ ನಿರ್ವಹಿಸುತ್ತಿದ್ದ ಪೊಲೀಸ್ ಸಿಬ್ಬಂದಿಯ ಮಾನವೀಯ ನಡೆ ಸ್ಥಳೀಯರ ಮೆಚ್ಚುಗೆಗೆ ಪಾತ್ರವಾಯಿತು.

ಕಾನ್ಸ್‌ಟೇಬಲ್ ಅನಿಲ್ ಅವರ ಸೇವಾ ಮನೋಭಾವದ ದೃಶ್ಯ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, "ಖಾಕಿ ಅಂದರೆ ಕೇವಲ ಕಾನೂನು ಸುವ್ಯವಸ್ಥೆ ಮಾತ್ರವಲ್ಲ, ಮಾನವೀಯತೆಯ ಸಂಕೇತವೂ ಹೌದು" ಎಂದು ಸಾರ್ವಜನಿಕರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

---

## ಶರಣ ಸಂಗಮದಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಬಸವದಳ ವತಿಯಿಂದ ಪ್ರತಿವಾರ ಹಮ್ಮಿಕೊಳ್ಳಲಾಗುತ್ತಿರುವ ಶರಣ ಸಂಗಮ ಕಾರ್ಯಕ್ರಮದ ಅಂಗವಾಗಿ 1700ನೇ ಶರಣ ಸಂಗಮವು ಮೇ 31ರಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಜರುಗಲಿದೆ.

ಈ ಸಂದರ್ಭದಲ್ಲಿ "ತಾಯಿ-ಮಗುವಿನ ಲಾಲನೆ-ಪಾಲನೆಯಲ್ಲಿ ಪೋಷಕರ ಪಾತ್ರ" ವಿಷಯ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿ.ಕೆ. ಕರೇಗೌಡ್ರ ವಹಿಸಲಿದ್ದು, ನೇತ್ರ ತಜ್ಞರಾದ ಡಾ. ಅಕ್ಷತಾ ಡಾ. ಸಂದೀಪ ಕವಳಿಕಾಯಿ ಉಪನ್ಯಾಸ ನೀಡಲಿದ್ದಾರೆ.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ತೋಟಗಾರಿಕೆ ಯೋಜನೆಗಳಡಿ ರೈತರಿಗೆ ಸಹಾಯಧನ

**■ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಸಾಲಿನ ರಾಷ್ಟ್ರೀಯ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಮಿಷನ್ ಯೋಜನೆ (ಒಱಆಊ) ಹಾಗೂ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ (ಕಒಏಖಜ) ಅಡಿಯಲ್ಲಿ ವಿವಿಧ ಘಟಕಗಳಿಗೆ ರೈತರಿಂದ ಸಹಾಯಧನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಯೋಜನೆಯಡಿ ಹೊಸ ಪ್ರದೇಶ ವಿಸ್ತರಣೆಗೆ ಕಂದು ಬಾಳೆ, ಅಂಗಾಂಶ ಬಾಳೆ, ಪಪ್ಪಾಯಿ, ಅಂಜೂರ, ದಾಳಿಂಬೆ, ಮಾವು, ಸೀಬೆ, ಹುಣಸೆ, ನಿಂಬೆ, ಹೈಬ್ರಿಡ್ ತರಕಾರಿ ಬೆಳೆಗಳು, ಸೇವಂತಿಗೆ, ಚೆಂಡು ಹೂವು, ಮಲ್ಲಿಗೆ, ಸಾಂಬಾರು ಮತ್ತು ಔಷಧಿ ಗಿಡಗಳ ಬೆಳೆಗಳಿಗೆ ಸಹಾಯಧನ ನೀಡಲಾಗುತ್ತದೆ.

ಇದೇ ವೇಳೆ ಕೃಷಿಹೊಂಡ, ಪ್ಲಾಸ್ಟಿಕ್ ಹೊದಿಕೆ, ಪಕ್ಷಿ ನಿರೋಧಕ ಬಲೆ, ಕಳೆ ಛಾಪೆ, 20 ಕಖಿಔ ಊಕ ವರೆಗೆ 2ಘಳ ಹಾಗೂ 4ಘಳ ಟ್ರ್ಯಾಕ್ಟರ್, ಫಾರ್ಮ್‌ಗೇಟ್ ಪ್ಯಾಕ್‌ಹೌಸ್, ಈರುಳ್ಳಿ ಶೇಖರಣಾ ಘಟಕ, ತಳ್ಳುವ ಗಾಡಿ ಸೇರಿದಂತೆ ವಿವಿಧ ಘಟಕಗಳಿಗೂ ಅನುದಾನ ಸಿಗಲಿದೆ.

ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ವ್ಯವಸ್ಥೆಗೂ ಸಹಾಯಧನ ದೊರೆಯಲಿದೆ. ಅಲ್ಲದೇ ರಾಜ್ಯ ಸಾಮರ್ಥ್ಯವುಳ್ಳ ರಾಜ್ಯಗಳಲ್ಲಿ ಎಣ್ಣೆ ತಾಳೆ (ಔಟ ಕಚಿಟಟ) ಕೃಷಿ ಯೋಜನೆಯಡಿ ಹೊಸ ಪ್ರದೇಶ ವಿಸ್ತರಣೆಯಿಗೂ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದ ರೈತರು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯೊಂದಿಗೆ ಪಹಣಿ ಹಾಗೂ ಆಧಾರ್ ಕಾರ್ಡ್ ಪ್ರತಿಯನ್ನು ಲಗತ್ತಿಸಬೇಕು.

ಆಸಕ್ತ ರೈತರು ಜೂನ್ 15ರೊಳಗಾಗಿ ಮುಂಡರಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ (ಜಿಲ್ಲಾ ಪಂಚಾಯತ್) ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಮಾರ್ಗಸೂಚಿ ಪ್ರಕಾರ ಆಯ್ಕೆಯಾದ ರೈತರಿಗೆ ಜೇಷ್ಠತೆ ಮತ್ತು ಆದ್ಯತೆ ಆಧಾರದ ಮೇಲೆ ಸಹಾಯಧನ ಮಂಜೂರು ಮಾಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಅನಧಿಕೃತ ಲಾಟರಿ–ಮಟ್ಕಾ ದಂಧೆಗೆ ಜಿಲ್ಲಾಡಳಿತ ಖಡಕ್ ಎಚ್ಚರಿಕೆ

# ಮಟ್ಕಾ ಆಡಿದ್ರೆ ಗಡಿಪಾರು ಗ್ಯಾರಂಟಿ!

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿನ ಅನಧಿಕೃತ ಲಾಟರಿ ಹಾಗೂ ಮಟ್ಕಾ ದಂಧೆಯಲ್ಲಿ ಭಾಗಿಯಾಗುವವರ ವಿರುದ್ಧ ಕಾನೂನುಬದ್ಧವಾಗಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಖಡಕ್ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ನಡೆದ 2025–26ನೇ ಸಾಲಿನ ನಾಲ್ಕನೇ ತ್ರೈಮಾಸಿಕ (ಜನವರಿ 2026ರಿಂದ ಮಾರ್ಚ್ 2026ರವರೆಗೆ) ಫ್ಲೇಯಿಂಗ್ ಸ್ಕ್ವಾಡ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮಟ್ಕಾ ಪ್ರಕರಣಗಳಲ್ಲಿ ಬಾಕಿ ಇರುವ ಪ್ರಕರಣಗಳು ವಿಚಾರಣೆ ಹಂತದಲ್ಲಿದ್ದು, ಅವುಗಳನ್ನು ಶೀಘ್ರ ಇತ್ಯರ್ಥಪಡಿಸಬೇಕು ಎಂದು ಸೂಚಿಸಿದರು. ವಾಣಿಜ್ಯ ತೆರಿಗೆ ಇಲಾಖೆ ಜಿಎಸ್‌ಟಿ ಕಾಯ್ದೆಯಡಿ ಕಾರ್ಯನಿರ್ವಹಿಸುತ್ತಿದ್ದು, ಗಡಿಪಾರು ಮಾಡಲಾಗಿರುವ ಆರೋಪಿತರ ಆರ್ಥಿಕ ಸ್ಥಿತಿಗತಿಗಳ ಬಗ್ಗೆ ಪರಿಶೀಲನೆ ನಡೆಸಿ ತಮ್ಮ ಕಾರ್ಯವ್ಯಾಪ್ತಿಯೊಳಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ವಾಣಿಜ್ಯ ತೆರಿಗೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಸಭೆಯಲ್ಲಿ ಮಾತನಾಡಿದ ಡಿವೈಎಸ್‌ಪಿ ಮಹಾಂತೇಶ ಸಜ್ಜನ, ಜನವರಿ 2026ರಲ್ಲಿ ಮುಂಡರಗಿ ಪೊಲೀಸ್ ಠಾಣೆ ವ್ಯಾಪ್ತಿಯ ಬಸವರಾಜ ತಂದೆ ಮೈಲಪ್ಪ ದೊಡ್ಡಮನಿ, ಸಾ: ಡಂಬಳ, ವಯಸ್ಸು 21 ಇವರನ್ನು ವಿಜಯನಗರ ಜಿಲ್ಲೆಯ ಕೂಡ್ಲಿಗಿ ಪೊಲೀಸ್ ಠಾಣೆ ವ್ಯಾಪ್ತಿಗೆ ಗಡಿಪಾರು ಮಾಡಿ ಆದೇಶಿಸಲಾಗಿದೆ ಎಂದು ಮಾಹಿತಿ ನೀಡಿದರು.

ಅದೇ ರೀತಿ, ಶಿರಹಟ್ಟಿ ಪೊಲೀಸ್ ಠಾಣೆ ವ್ಯಾಪ್ತಿಯ ವಿರುಪಾಕ್ಷಪ್ಪ ತಂದೆ ಶಂಕ್ರಪ್ಪ ಸಂಗಪ್ಪಶೆಟ್ಟರ, ಸಾ: ಶಿರಹಟ್ಟಿ, ವಯಸ್ಸು 58 ಇವರನ್ನು ವಿಜಯನಗರ ಜಿಲ್ಲೆಯ ಕೊಟ್ಟೂರು ಪೊಲೀಸ್ ಠಾಣೆ ವ್ಯಾಪ್ತಿಗೆ ಗಡಿಪಾರು ಮಾಡಿ ಆದೇಶಿಸಿರುವುದಾಗಿ ಸಭೆಗೆ ತಿಳಿಸಿದರು.

> "ಮಟ್ಕಾ ಹಾಗೂ ಅನಧಿಕೃತ ಲಾಟರಿ ದಂಧೆಯಲ್ಲಿ ಭಾಗಿಯಾಗುವವರ ವಿರುದ್ಧ ಕಾನೂನುಬದ್ಧವಾಗಿ ಕಠಿಣ ಕ್ರಮ ಕೈಗೊಳ್ಳಲಾಗುವುದು."
> – **ಸಿ.ಎನ್. ಶ್ರೀಧರ್**, ಜಿಲ್ಲಾಧಿಕಾರಿ

ಮೂರುಕ್ಕಿಂತ ಹೆಚ್ಚು ಮಟ್ಕಾ ಪ್ರಕರಣಗಳಲ್ಲಿ ಭಾಗಿಯಾಗಿರುವ ಆರೋಪಿತರ ವಿರುದ್ಧ ಗಡಿಪಾರು ಶಿಕ್ಷೆ ವಿಧಿಸಲಾಗುತ್ತಿದ್ದು, ಈ ಕಠಿಣ ಕ್ರಮದಿಂದ ಜಿಲ್ಲೆಯಲ್ಲಿನ ಮಟ್ಕಾ ಪ್ರಕರಣಗಳು ಇಳಿಮುಖವಾಗುತ್ತಿವೆ ಎಂದು ಡಿವೈಎಸ್‌ಪಿ ಮಹಾಂತೇಶ ಸಜ್ಜನ ಹೇಳಿದರು.

ಸಭೆಯಲ್ಲಿ ಪಿಂಚಣಿ, ಸಣ್ಣ ಉಳಿತಾಯ ಮತ್ತು ಆಸ್ತಿ–ಋಣ ನಿರ್ವಹಣೆ ಇಲಾಖೆ ಸಹಾಯಕ ನಿರ್ದೇಶಕ ಶ್ರೀಧರ ಚಿನಗುಂಡಿ, ಅಭಿವೃದ್ಧಿ ಅಧಿಕಾರಿ ನಾಗರಾಜ ಉಪ್ಪಾರ, ವಾಣಿಜ್ಯ ತೆರಿಗೆ ಇಲಾಖೆ (ಜಾರಿ–2) ಅಧಿಕಾರಿ ರಾಜಶೇಖರಯ್ಯ ಕಾಲವಾಡಮಠ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

**ಗಡಿಪಾರುಗೊಂಡ ಆರೋಪಿತರು**

1. ಬಸವರಾಜ ತಂದೆ ಮೈಲಪ್ಪ ದೊಡ್ಡಮನಿ (21), ಸಾ: ಡಂಬಳ
2. ವಿಜಯನಗರ ಜಿಲ್ಲೆ ಕೂಡ್ಲಿಗಿ ಪೊಲೀಸ್ ಠಾಣೆ ವ್ಯಾಪ್ತಿಗೆ ಗಡಿಪಾರು
3. ವಿರುಪಾಕ್ಷಪ್ಪ ತಂದೆ ಶಂಕ್ರಪ್ಪ ಸಂಗಪ್ಪಶೆಟ್ಟರ (58), ಸಾ: ಶಿರಹಟ್ಟಿ
4. ವಿಜಯನಗರ ಜಿಲ್ಲೆ ಕೊಟ್ಟೂರು ಪೊಲೀಸ್ ಠಾಣೆ ವ್ಯಾಪ್ತಿಗೆ ಗಡಿಪಾರು

### ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ 25ನೇ ವರ್ಷಾಚರಣೆಗೆ ಭರ್ಜರಿ ತಯಾರಿ

## ಜೂ. 7ರಿಂದ ರಜತ ಮಹೋತ್ಸವದ ಸಂಭ್ರಮಕ್ಕೆ ಚಾಲನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ 25ನೇ ವರ್ಷದ ರಜತ ಮಹೋತ್ಸವವನ್ನು ವರ್ಷಪೂರ್ತಿ ಅರ್ಥಪೂರ್ಣ ಹಾಗೂ ಜನಪರ ಕಾರ್ಯಕ್ರಮಗಳ ಮೂಲಕ ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಲಾಗಿದ್ದು, ಇದೇ ಜೂನ್ 7ರಂದು ಕೊಪ್ಪಳದ ಗವಿಸಿದ್ಧೇಶ್ವರ ಶ್ರೀಗಳು ಮಹೋತ್ಸವಕ್ಕೆ ಅಧಿಕೃತ ಚಾಲನೆ ನೀಡಲಿದ್ದಾರೆ.



ನಗರದ ದೇವರಾಜ ಅರಸು ಹಾಸ್ಟೆಲ್ ಕಚೇರಿಯಲ್ಲಿ ಶನಿವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ್ರ ಪಾಟೀಲ ಮಾತನಾಡಿ, "25ನೇ ವರ್ಷಾಚರಣೆಯ ಅಂಗವಾಗಿ 25 ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಸ್ವಾಗತಾರ್ಹ. ಶಿಕ್ಷಣ, ಕಲೆ, ಸಾಹಿತ್ಯ, ಸಂಗೀತ ಹಾಗೂ ಸಮಾಜಸೇವೆಯಲ್ಲಿ ಸಾಧನೆ ಮಾಡಿದ 25 ಮಂದಿಯನ್ನು ಗುರುತಿಸಿ ಸನ್ಮಾನಿಸಬೇಕು" ಎಂದು ಹೇಳಿದರು.

ಜಿಲ್ಲೆಯ ನಿರುದ್ಯೋಗಿ ಯುವಕ–ಯುವತಿಯರಿಗಾಗಿ ಕೌಶಲ್ಯಾಭಿವೃದ್ಧಿ ಮತ್ತು ಕರಿಯರ್ ಗೈಡೆನ್ಸ್ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸ್ವಾವಲಂಬಿ ಬದುಕಿಗೆ ದಾರಿ ತೋರಿಸಬೇಕು ಎಂದು ಸಲಹೆ ನೀಡಿದ ಅವರು, ಮಕ್ಕಳಿಗಾಗಿ ಬ್ಯಾಡ್ಮಿಂಟನ್, ಸ್ಕೇಟಿಂಗ್ ಸೇರಿದಂತೆ ವಿಶೇಷ ಕ್ರೀಡಾಕೂಟಗಳನ್ನು ಹಮ್ಮಿಕೊಳ್ಳುವಂತೆ ಮನವಿ ಮಾಡಿದರು.

ಪರಿಸರ ದಿನಾಚರಣೆಯ ಅಂಗವಾಗಿ ಕೇವಲ ಸಸಿ ನೆಡುವುದಕ್ಕೆ ಸೀಮಿತವಾಗದೆ, ನಗರದ ಹೊರವಲಯದ ರಾಷ್ಟ್ರೀಯ ಹೆದ್ದಾರಿ ರಸ್ತೆ ಡಿವೈಡರ್‌ಗಳಲ್ಲಿ ಸಸಿ ನೆಟ್ಟು ಅವುಗಳ ನಿರಂತರ ಪೋಷಣೆಗೆ ವ್ಯವಸ್ಥೆ ಮಾಡಬೇಕು. ಈ ರೀತಿಯ ಕಾರ್ಯಗಳಿಂದ ಸಮಿತಿಯ ಹೆಸರು ಜನಮನದಲ್ಲಿ ಶಾಶ್ವತವಾಗಿ ಉಳಿಯಲಿದೆ ಎಂದು ಕೃಷ್ಣಗೌಡ್ರ ಪಾಟೀಲ ಅಭಿಪ್ರಾಯಪಟ್ಟರು.

ನಿವೃತ್ತ ನ್ಯಾಯಮೂರ್ತಿ ಎಸ್.ಜಿ. ಪಲ್ಲೇದ ಮಾತನಾಡಿ, "ಕಾರ್ಯಕ್ರಮದಲ್ಲಿ ಗವಿಸಿದ್ಧೇಶ್ವರ ಶ್ರೀಗಳ ಆಶೀರ್ವಚನಕ್ಕೆ ಹೆಚ್ಚಿನ ಸಮಯ ನೀಡಬೇಕು. ಅವರ ಹಿತೋಪದೇಶ ಜನರಿಗೆ ದಾರಿದೀಪವಾಗಲಿದೆ" ಎಂದರು.

ಆರ್.ಡಿ. ಕಡ್ಲಿಕೊಪ್ಪ ಮಾತನಾಡಿ, ಪರಿಸರ ದಿನಾಚರಣೆಯ ಅಂಗವಾಗಿ ಮನೆಮನೆಗಳಿಗೆ ಸಸಿಗಳನ್ನು ಹಂಚಿ ಅವುಗಳ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರ ಮಾತನಾಡಿ, "ಆರೋಗ್ಯ ಶಿಬಿರ, ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮ, ಪರಿಸರ ದಿನಾಚರಣೆ ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಎಲ್ಲರೂ ಸೇರಿ ಈ ರಜತ ಮಹೋತ್ಸವವನ್ನು ಅವಿಸ್ಮರಣೀಯವಾಗಿಸೋಣ" ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಬಯಲು ಆಂಜನೇಯ ದೇವಸ್ಥಾನ ಸಮಿತಿಯ ಅಧ್ಯಕ್ಷ ಎಸ್.ಕೆ. ಮ್ಯಾಗೇರಿ, ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ಬಿ.ಬಿ. ಬಾವಿಕಟ್ಟಿ, ಯಲ್ಲಪ್ಪ ಗುರಿಕಾರ, ಶಶಿಧರ ರೊಳ್ಳಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸಭೆಯಲ್ಲಿ ನಾಗಪ್ಪ ಗುಗ್ಗರಿ, ಆರ್.ಎಂ. ನಿಂಬನಾಯ್ಕರ, ಎಸ್.ಡಿ. ಸಿಂಗಟಾಲಕೇರಿ, ಎಸ್.ಎಸ್. ಮುದಿಯಜ್ಜನವರ, ಆರ್.ಎಸ್. ಕುರಿಯವರ, ಮೋಹನ ಇಮರಾಪೂರ, ಹನುಮಂತಪ್ಪ ಗೊಜನೂರ, ಎಚ್.ಬಿ. ಪೋತಿ, ಬಿ.ಎಚ್. ಹ್ಯಾಟಿ, ಎಸ್.ಎಸ್. ಕರಡಿ, ಡಿ.ವೈ. ವಡಗೇರಿ, ಎ.ಬಿ. ಹುಗ್ಗೆಣ್ಣವರ, ವಿ.ಸಿ. ಚವಡಿಶೆಟ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವೈ.ಬಿ. ಬಾನಾಪೂರ ಸ್ವಾಗತಿಸಿದರು. ನೀಲಕಂಠ ಮರಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೆ.ಬಿ. ಕಂಬಳಿ ವಂದಿಸಿದರು.

## ಗ್ರಾಮೀಣ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಬೆಳಕಾದ ಶಿಕ್ಷಣ ದಾನಿ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಗ್ರಾಮೀಣ ಭಾಗದ ಮಕ್ಕಳ, ವಿಶೇಷವಾಗಿ ಹೆಣ್ಣು ಮಕ್ಕಳ ಉನ್ನತ ಶಿಕ್ಷಣಕ್ಕೆ ದಾರಿ ತೆರೆದವರು ದಿವಂಗತ ಆರ್.ಎನ್. ದೇಶಪಾಂಡೆ ಎಂದು ಸುಮನ ಚವಡಿ ಹೇಳಿದರು.

ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2025–26ನೇ ಶೈಕ್ಷಣಿಕ ಸಾಲಿನ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳ ಸಮಾರೋಪ "ಜ್ಞಾನ ಸಿಂಚನ" ವಾರ್ಷಿಕ ಸ್ಮರಣ ಸಂಚಿಕೆ ಬಿಡುಗಡೆ ಹಾಗೂ ಬಿ.ಎ., ಬಿಕಾಂ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಗ್ರಾಮೀಣ ಹೆಣ್ಣು ಮಕ್ಕಳು ಪದವಿ ಶಿಕ್ಷಣಕ್ಕಾಗಿ ಜಿಲ್ಲಾ ಕೇಂದ್ರಗಳಿಗೆ ತೆರಳಲು ಹಿಂಜರಿಯುತ್ತಿದ್ದ ಪರಿಸ್ಥಿತಿಯನ್ನು ಮನಗಂಡು, ಪದವಿ ಕಾಲೇಜಿಗಾಗಿ ಐದು ಎಕರೆ ಜಮೀನು ನೀಡುವ ಮೂಲಕ ಆರ್.ಎನ್. ದೇಶಪಾಂಡೆ ಅವರು ಶಿಕ್ಷಣದ ಬೆಳಕು ಹರಡಿದರು ಎಂದು ಹೇಳಿದರು.

ಎ.ಎಂ. ಅಂಗಡಿ ಮಾತನಾಡಿ, "ಇದು ಸ್ಪರ್ಧಾತ್ಮಕ ಜಗತ್ತು. ವಿದ್ಯಾರ್ಥಿಗಳು ಯುಪಿಎಸ್‌ಸಿ, ಕೆಪಿಎಸ್‌ಸಿ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ನೀಡುವ ಬೋಧಕ ಸಿಬ್ಬಂದಿಯ ಮಾರ್ಗದರ್ಶನವನ್ನು ಸದುಪಯೋಗಪಡಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು" ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಡಾ. ಆರ್.ಎಂ. ಕಲ್ಲನಗೌಡ್ರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಸಿಪಿಐ ಬಿ.ಜಿ. ಸುಬ್ಬಾಪುರಮಠ, ಎ.ಎಂ. ಅಂಗಡಿ, ನಾಗರಾಜ ದೇಶಪಾಂಡೆ, ಅಶೋಕ ಸೋನಗೋಜಿ, ಸಂತೋಷ ದೇಶಪಾಂಡೆ, ವಿಜಯ ನೀಲಗುಂದ, ಸುಮನ ಚವಡಿ, ಡಾ. ಶಿವಪ್ಪ ಮುದಿಯಜ್ಜನವರ ಸೇರಿದಂತೆ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಶಾಲಾ ಪ್ರಾರಂಭೋತ್ಸವಕ್ಕೆ ಭರ್ಜರಿ ಸಿದ್ಧತೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

2026–27ನೇ ಶೈಕ್ಷಣಿಕ ವರ್ಷದ ಶಾಲೆಗಳು ಆರಂಭ ವಾಗಿರುವ ಹಿನ್ನೆಲೆಯಲ್ಲಿ ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಗೆ ಡಯಟ್ ಉಪ ಪ್ರಾಂಶುಪಾಲರು ಹಾಗೂ ಶಿರಹಟ್ಟಿ ತಾಲೂಕು ನೋಡಲ್ ಅಧಿಕಾರಿ ಜಿ.ಎಂ. ಮುಂದಿನಮನಿ ಭೇಟಿ ನೀಡಿ ಶಾಲಾ ಆರಂಭೋತ್ಸವದ ಸಿದ್ಧತೆಗಳನ್ನು ಪರಿಶೀಲಿಸಿದರು.

ಶಾಲೆಯಲ್ಲಿ ಪ್ರಸಕ್ತ ಸಾಲಿನ ಸೇತುಬಂಧ ಕಾರ್ಯಕ್ರಮ, ಶಾಲಾ ಪ್ರಾರಂಭೋತ್ಸವದ ಪೂರ್ವ ತಯಾರಿ, ವೇಳಾಪಟ್ಟಿ, ಶಾಲಾ ಸ್ವಚ್ಛತಾ ಕಾರ್ಯಕ್ರಮ, ಮಧ್ಯಾಹ್ನ ಉಪಹಾರ ಯೋಜನೆ, ಪಠ್ಯಪುಸ್ತಕ ಹಾಗೂ ಸಮವಸ್ತ್ರ ವಿತರಣೆ ಸೇರಿದಂತೆ ವಿವಿಧ ಶೈಕ್ಷಣಿಕ ಚಟುವಟಿಕೆಗಳ ಕುರಿತು ಮಾರ್ಗದರ್ಶನ ನೀಡಿದರು.

ಈ ಸಂದರ್ಭದಲ್ಲಿ ಸಿಆರ್‌ಪಿ ಸಂಪನ್ಮೂಲ ವ್ಯಕ್ತಿ ಶ್ರೀನಿವಾಸ್ ಮತ್ತೂರ, ಮುಖ್ಯ ಶಿಕ್ಷಕ ಬಿ.ಎಂ. ಕುಂಬಾರ ಹಾಗೂ ಎಂ.ಪಿ.ಎಸ್. ನಂ.1 ಶಾಲೆಯ ಮುಖ್ಯ ಶಿಕ್ಷಕ ಡಿ.ಎನ್. ದೊಡ್ಡಮನಿ ಉಪಸ್ಥಿತರಿದ್ದರು.

ಇದೇ ವೇಳೆ ಸೇವಾ ನಿವೃತ್ತಿ ಹೊಂದಿದ ಪಟ್ಟಣದ ಅಂಬೇಡ್ಕರ ನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಎಲ್.ಆರ್. ಮಲಸಮುದ್ರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

## ನಾಳೆ ಲಕ್ಷ್ಮೇಶ್ವರದಲ್ಲಿ ಭಕ್ತರ ಮಹತ್ವದ ಸಭೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಂಭಾಪುರಿ ಲಿಂ. ಜಗದ್ಗುರು ವೀರಗಂಗಾಧರ ಶಿವಾಚಾರ್ಯ ಭಗವತ್ಪಾದರು ಅವರ ಕಲ್ಲಿನ ಮೂರ್ತಿ ನಿರ್ಮಾಣದ ಕುರಿತು ಚರ್ಚಿಸಲು ಭಕ್ತ ಸಮೂಹದ ಮಹತ್ವದ ಸಭೆಯನ್ನು ಜೂನ್ 1ರಂದು ಸೋಮವಾರ ಬೆಳಿಗ್ಗೆ 11 ಗಂಟೆಗೆ ಕರೆಯಲಾಗಿದೆ.

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದ ತೇರಿನ ಮನೆ ಹತ್ತಿರ ಇರುವ ಶ್ರೀ ಇಟಗಿ ಬಸವೇಶ್ವರ ದೇವಸ್ಥಾನದಲ್ಲಿ ಸಭೆ ನಡೆಯಲಿದ್ದು, ಮೂರ್ತಿ ನಿರ್ಮಾಣದ ಕುರಿತು ರೂಪುರೇಷೆ ಹಾಗೂ ಮುಂದಿನ ಕಾರ್ಯಚಟುವಟಿಕೆಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದು ಸಂಘಟಕರು ತಿಳಿಸಿದ್ದಾರೆ.

ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮ ಹಾಗೂ ನಗರ ಪ್ರದೇಶಗಳ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಲಹೆ–ಸೂಚನೆಗಳನ್ನು ನೀಡಬೇಕು ಎಂದು ಮನವಿ ಮಾಡಲಾಗಿದೆ.

## ಬೀದಿ ನಾಯಿ ದಾಳಿಗೆ ಏಳು ಜನ ಗಾಯ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಹಂಪಾಪಟ್ಟಣ ಗ್ರಾಮದಲ್ಲಿ ಬೀದಿ ನಾಯಿಯೊಂದು ಸರಣಿ ದಾಳಿ ನಡೆಸಿ ಏಳು ಮಂದಿಗೆ ಗಾಯಪಡಿಸಿದ ಘಟನೆ ಗ್ರಾಮಸ್ಥರಲ್ಲಿ ಭೀತಿ ಮೂಡಿಸಿದೆ.



ಗುರುವಾರ ಸಂಜೆ ಸುಮಾರು 4 ಗಂಟೆ ವೇಳೆಗೆ ಗ್ರಾಮದ ರಸ್ತೆಯಲ್ಲಿ ಸಂಚರಿಸುತ್ತಿದ್ದ ಜನರ ಮೇಲೆ ಏಕಾಏಕಿ ದಾಳಿ ನಡೆಸಿದ ನಾಯಿ, ಮೂವರಿಗೆ ಕಚ್ಚಿ ಗಾಯಪಡಿಸಿದೆ. ಬಳಿಕ ಅದೇ ರಾತ್ರಿ ಇನ್ನೂ ಮೂವರ ಮೇಲೆ ದಾಳಿ ನಡೆಸಿದ್ದು, ಶುಕ್ರವಾರ ಮುಂಜಾನೆ ಮತ್ತೊಬ್ಬ ಯುವಕನಿಗೂ ನಾಯಿ ಕಚ್ಚಿರುವುದಾಗಿ ತಿಳಿದು ಬಂದಿದೆ.

ಹೀಗೆ ಎರಡು ದಿನಗಳ ಅವಧಿಯಲ್ಲಿ ಏಳು ಮಂದಿ ಗಾಯಗೊಂಡಿದ್ದು, ಗ್ರಾಮದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಗಾಯಾಳುಗಳನ್ನು ತಕ್ಷಣ ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ನೀಡಲಾಗಿದೆ. ಗಂಭೀರವಾಗಿ ಗಾಯಗೊಂಡ ಕೆಲವರನ್ನು ಹೆಚ್ಚಿನ ಚಿಕಿತ್ಸೆಗೆ ಕೊಪ್ಪಳ ಆಸ್ಪತ್ರೆಗೆ ರವಾನಿಸಲಾಗಿದೆ.

ನಾಯಿಯ ದಾಳಿಯಿಂದ ಗ್ರಾಮಸ್ಥರು ಭಯಭೀತರಾಗಿದ್ದು, ಸ್ಥಳೀಯರು ನಾಯಿಯನ್ನು ಓಡಿಸಿ ಪರಿಸ್ಥಿತಿಯನ್ನು ನಿಯಂತ್ರಿಸಿದ್ದಾರೆ. ಗ್ರಾಮದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಬೀದಿ ನಾಯಿಗಳ ನಿಯಂತ್ರಣಕ್ಕೆ ಮುಂದಾಗಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

## ತಿಪ್ಪಣ್ಣ ಕಮಕನೂರ್‌ಗೆ ಸಚಿವ ಸ್ಥಾನ ನೀಡಿ!



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ವಿಜಯನಗರ ಜಿಲ್ಲೆಯ ಹಿಂದುಳಿದ ವರ್ಗಗಳ ನಾಯಕ ಹಾಗೂ ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣ ಕಮಕನೂರ್ ಅವರಿಗೆ ಸಚಿವ ಸ್ಥಾನ ನೀಡಬೇಕು ಹಾಗೂ ಅವರ ವಿಧಾನ ಪರಿಷತ್ ಸದಸ್ಯತ್ವ ಅವಧಿಯನ್ನು ಮುಂದಿನ ಆರು ವರ್ಷಗಳಿಗೆ ವಿಸ್ತರಿಸಬೇಕು ಎಂದು ವಿಜಯನಗರ ಜಿಲ್ಲಾ ಗಂಗಾಮತ ಬೆಸ್ತ ಸಮಾಜ ಸಂಘ ಸರ್ಕಾರವನ್ನು ಒತ್ತಾಯಿಸಿದೆ.

ಪಟ್ಟಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ವಿಜಯನಗರ ಜಿಲ್ಲಾ ಗಂಗಾಮತ ಬೆಸ್ತ ಸಮಾಜದ ಜಿಲ್ಲಾಧ್ಯಕ್ಷ ಅಂಬಾಡಿ ನಾಗರಾಜ್, "ಗಂಗಾಮತ, ಬೆಸ್ತ, ಕೋಲಿ ಹಾಗೂ ಕಬ್ಬಲಿಗ ಸಮಾಜದ ಪ್ರತಿನಿಧಿಯಾಗಿ ತಿಪ್ಪಣ್ಣ ಕಮಕನೂರ್ ಅವರು ಹಲವು ವರ್ಷಗಳಿಂದ ಸಾಮಾಜಿಕ ಹೋರಾಟ ನಡೆಸಿದ್ದಾರೆ. ಆಡಳಿತದ ಅನುಭವ ಹೊಂದಿರುವ ಅವರು ಜನಪರ ಕಾಳಜಿಯ ನಾಯಕ" ಎಂದು ಹೇಳಿದರು.

ಜೂನ್ 2026ಕ್ಕೆ ತಿಪ್ಪಣ್ಣ ಕಮಕನೂರ್ ಅವರ ನಾಲ್ಕು ವರ್ಷದ ಸದಸ್ಯತ್ವ ಅವಧಿ ಪೂರ್ಣಗೊಳ್ಳಲಿದ್ದು, ಅವರ ಅನುಭವ ಹಾಗೂ ಸಮಾಜಪರ ಸೇವೆಯನ್ನು ಗಮನಿಸಿ ಮುಂದಿನ ಆರು ವರ್ಷಗಳಿಗೂ ಅವಧಿ ವಿಸ್ತರಿಸಬೇಕು ಎಂದು ಆಗ್ರಹಿಸಿದರು.

ನಿಯೋಜಿತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಹೊಸ ಸಚಿವ ಸಂಪುಟದಲ್ಲಿ ತಿಪ್ಪಣ್ಣ ಕಮಕನೂರ್ ಅವರಿಗೆ ಸಚಿವ ಸ್ಥಾನ ನೀಡಬೇಕು. ಹಿಂದುಳಿದ ವರ್ಗಗಳ ಧ್ವನಿಯಾಗಿ ಕೆಲಸ ಮಾಡುತ್ತಿರುವ ನಾಯಕರಿಗೆ ಸರ್ಕಾರ ಸೂಕ್ತ ಗೌರವ ನೀಡಬೇಕು ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸರ್ದಾರ್ ಯಮನೂರಪ್ಪ, ಬಾರಿಕರ ಪರಶುರಾಮ್, ಸೂರ್ಯ ನಾರಾಯಣಪ್ಪ, ಸರ್ದಾರ್ ಜೀವಪ್ಪ, ಎಲ್‌ಐಸಿ ಪರಶುರಾಮ್, ಸರ್ದಾರ ಸಿದ್ದಪ್ಪ, ವೆಂಕಟೇಶ್ ವಲ್ಲಭಾಪುರ, ಪೂಜಾರ್ ಶ್ರೀನಿವಾಸ್, ಅಂಬಿಗರ ಮಂಜುನಾಥ, ಅಕಾರಿ ಸುನಿಲ್, ಅಂಬಿಗರ ಪುನೀತ್ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

## ಕಸ ವಿಂಗಡಣೆ ಕಡ್ಡಾಯ: ನಿಯಮ ಉಲ್ಲಂಘಿಸಿದರೆ ದಂಡ

**▶▶ಮೊದಲನೇ ಪುಟದಿಂದ**

ಬಲ್ಬ್‌ಗಳು, ಟ್ಯೂಬ್‌ಲೈಟ್‌ಗಳು, ವೈದ್ಯಕೀಯ ತ್ಯಾಜ್ಯ ಹಾಗೂ ಹಳೆಯ ಬ್ಯಾಟರಿಗಳು ಪರಿಸರಕ್ಕೆ ಹಾನಿಕಾರಕವಾಗಿರುವುದರಿಂದ ವಿಶೇಷ ವಿಲೇವಾರಿ ಅಗತ್ಯವಿದೆ ಎಂದು ತಿಳಿಸಲಾಗಿದೆ.

ನಾಲ್ಕು ವಿಭಾಗಗಳಾಗಿ ವಿಂಗಡಿಸದ ಮಿಶ್ರ ಕಸವನ್ನು ಯಾವುದೇ ಕಾರಣಕ್ಕೂ ಪಟ್ಟಣ ಪಂಚಾಯತಿ ವಾಹನದಲ್ಲಿ ಸ್ವೀಕರಿಸುವುದಿಲ್ಲ. ನಿಯಮ ಉಲ್ಲಂಘಿಸುವವರ ವಿರುದ್ಧ ದಂಡ ವಿಧಿಸುವುದರ ಜೊತೆಗೆ ವಿದ್ಯುತ್ ಮತ್ತು ನೀರಿನ ಸರಬರಾಜು ಸ್ಥಗಿತಗೊಳಿಸುವ ಕ್ರಮ ಕೈಗೊಳ್ಳಲಾಗುವುದು ಎಂದು ಶಿರಹಟ್ಟಿ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಎಚ್ಚರಿಸಿದ್ದಾರೆ.

### ಅರಣ್ಯ ಇಲಾಖೆಯ ಕಾಳಜಿಗೆ ಹಸಿರು ಹೊದಿಕೆ ತೊಟ್ಟ ಔಷಧೀಯ ಸಸ್ಯಗಳ ತಾಣ

# ಮಳೆಯ ಸಿಂಚನಕ್ಕೆ ಹಸಿರುಗೂಡಾದ ಕಪ್ಪತ್ತಗುಡ್ಡ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ವರ್ಷವಿಡೀ ಅರಣ್ಯ ಇಲಾಖೆಯ ವಿಶೇಷ ಕಾಳಜಿಯಿಂದ ಕಂಗೊಳಿಸುತ್ತಿರುವ ಕಪ್ಪತ್ತಗುಡ್ಡ ಇದೀಗ ಮತ್ತೆ ಪ್ರಕೃತಿ ಪ್ರಿಯರನ್ನು ತನ್ನತ್ತ ಕೈಬೀಸಿ ಕರೆಯುತ್ತಿದೆ. ದಿವ್ಯ ಔಷಧೀಯ ಸಸ್ಯಗಳ ಆಗರವಾಗಿರುವ ಕಪ್ಪತ್ತಗಿರಿಯ ಅರಣ್ಯ ಪ್ರದೇಶದಲ್ಲಿ ನಾನಾ ಬಗೆಯ ಸುವಾಸನೆಯ ಕಾಡು ಹೂಗಳು ಅರಳಿ ಪರಿಸರಾಸಕ್ತರ ಮನ ಸೆಳೆಯುತ್ತಿವೆ.

ಗದಗ, ಶಿರಹಟ್ಟಿ ಹಾಗೂ ಮುಂಡರಗಿ ತಾಲೂಕು ವ್ಯಾಪ್ತಿಯಲ್ಲಿ ಸುಮಾರು 62 ಕಿ.ಮೀ ಉದ್ದ ಹಾಗೂ 33 ಸಾವಿರ ಹೆಕ್ಟೇರ್ ವ್ಯಾಪ್ತಿಯಲ್ಲಿ ಹರಡಿಕೊಂಡಿರುವ ಕಪ್ಪತ್ತಗಿರಿ, ಮಳೆಯ ಸಿಂಚನಕ್ಕೆ ಹಚ್ಚಹಸಿರಿನಿಂದ ಕಂಗೊಳಿಸುತ್ತಿದೆ. ಇತ್ತೀಚೆಗೆ ಸುರಿಯುತ್ತಿರುವ ಮಳೆಯಿಂದ ಗುಡ್ಡದ ಅರಣ್ಯ ಪ್ರದೇಶ ಇನ್ನಷ್ಟು ಜೀವಂತಗೊಂಡಿದ್ದು, ನೂರಾರು ಬಗೆಯ ಹೂಗಳು ಅರಳಿ ಸುವಾಸನೆ ಬೀರುತ್ತಿವೆ. ದುಂಬಿಗಳ ಝೇಂಕಾರ, ಹಕ್ಕಿ-ಪಕ್ಷಿಗಳ ಕಲರವ, ವನ್ಯಜೀವಿಗಳ ಸಂಚಾರ ಹಾಗೂ ಮುಂಜಾನೆ ಗುಡ್ಡದ ಮಡಿಲಲ್ಲಿ ತೇಲಾಡುವ ಬೆಳ್ಳಿ ಮೋಡಗಳು ಕಪ್ಪತ್ತಗಿರಿಯ ಸೌಂದರ್ಯವನ್ನು ಇಮ್ಮಡಿಗೊಳಿಸಿವೆ.

**ಹೂಗಳ ಪರಿಮಳಕ್ಕೆ ಮನಸೋತ ಪ್ರವಾಸಿಗರು**

ರಾಜ್ಯ ಹಾಗೂ ವಿದೇಶಗಳಿಂದಲೂ ಪ್ರವಾಸಿಗರನ್ನು ಸೆಳೆಯುತ್ತಿರುವ ಕಪ್ಪತ್ತಗುಡ್ಡ ಪ್ರದೇಶದ ದ್ರೋಣಗಿರಿ ಸೇರಿದಂತೆ ಅನೇಕ ಬೆಟ್ಟಗಳ ಸುತ್ತಮುತ್ತ ಕಾಡು ಮಲ್ಲಿಗೆ,









"ಈಗಾಗಲೇ ಸುರಿದ ಅಕಾಲಿಕ ಮಳೆ ಹಾಗೂ ಸದ್ಯದ ಮಳೆಯಿಂದ ಕಪ್ಪತ್ತಗುಡ್ಡ ಸಂಪೂರ್ಣ ಹಸಿರಿನಿಂದ ಕಂಗೊಳಿಸುತ್ತಿದೆ. ನೂರಾರು ಔಷಧೀಯ ಸಸ್ಯಗಳು ಹೂ ಬಿಟ್ಟಿವೆ. ಈ ಬಾರಿ ರಾಜ್ಯ ಹಾಗೂ ಹೊರ ರಾಜ್ಯಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುವ ನಿರೀಕ್ಷೆ ಇದೆ. ಪರಿಸರ ಸಂರಕ್ಷಣೆಗೆ ಪ್ಲಾಸ್ಟಿಕ್ ಮುಕ್ತ ಚಾರಣಕ್ಕೆ ಒತ್ತು ನೀಡಲಾಗಿದೆ. ಪರಿಸರ ಹಾನಿಗೆ ಯತ್ನಿಸುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು."

**– ಮಂಜುನಾಥ ಆರ್. ಮೇಗಲಮನಿ,** ಅರಣ್ಯ ವಲಯಾಧಿಕಾರಿ, ಕಪ್ಪತ್ತಗುಡ್ಡ, ಮುಂಡರಗಿ ತಾಲೂಕು

ಹೊನ್ನವರೆ, ಡಬ್ಬುಗೊಳಿ, ಕಾಡು ಕನಕಾಂಬರ, ತಾವರೆ, ಸಂಪಿಗೆ, ಕಾಡು ಸೂರ್ಯಕಾಂತಿ, ನೀಲಿ ಕುರುಂಜಿ, ಕಾಡು ಗುಲಾಬಿ, ತಂಗಡಿ ಹೂ, ಬಿಳಿ ಲಿಲಿ, ಕೆಂಪು ಬಲ್ಸಂ ಹಾಗೂ ಕಾಡು ಚಾಮಂತಿ ಸೇರಿ ನೂರಾರು ಬಗೆಯ ಅಪರೂಪದ ಹೂಗಳು ಅರಳಿ ನಿಂತಿವೆ.

ಬೆಳಿಗ್ಗೆ ಮತ್ತು ಸಂಜೆ ವೇಳೆಯಲ್ಲಿ ಹರಡುವ ಸುಗಂಧ ಪರಿಸರವನ್ನು ಮತ್ತಷ್ಟು ಮನಮೋಹಕಗೊಳಿಸುತ್ತಿದೆ. ಹೂವಿನ ಮಕರಂದ ಸವಿಯಲು ಜೇನುನೊಣಗಳು ಹಾಗೂ ಬಣ್ಣ ಬಣ್ಣದ ಪತಂಗಗಳು ಗುಂಪುಗೂಡುತ್ತಿರುವ ದೃಶ್ಯ ಕಪ್ಪತ್ತಗುಡ್ಡದ ಎಲ್ಲೆಡೆ ಕಣ್ಮನ ಸೆಳೆಯುತ್ತಿದೆ.

**ಔಷಧೀಯ ಸಸ್ಯಗಳ ಅಪರೂಪದ ಭಂಡಾರ**

ಕಪ್ಪತ್ತಗಿರಿ ಕೇವಲ ಪ್ರವಾಸಿ ತಾಣವಷ್ಟೇ ಅಲ್ಲ, ಅಪರೂಪದ ಔಷಧೀಯ ಸಸ್ಯಗಳ ನೈಸರ್ಗಿಕ ಸಂಗ್ರಹಾಲಯವೂ ಹೌದು. ಬಸವನಪಾದ, ರುದ್ರಾಕ್ಷಿ, ಸಪ್ತಪರ್ಣ, ಅನಂತಮೂಲ, ಅಜವಾನ, ಅತ್ತಿ, ಅಡಸೋಗಿ, ಚಿತ್ರಮೂಲ, ಸಂಜೀವಿನಿ, ಕಾಡು ತುಳಸಿ, ಅಮೃತಬಳ್ಳಿ, ರಕ್ತಚಂದನ, ಪಾರಿಜಾತ, ಪುಷ್ಕರಮೂಲ, ಶಂಖಪುಷ್ಪ, ಹಿಪ್ಪಲಿ ಸೇರಿದಂತೆ ನೂರಾರು ಔಷಧೀಯ ಸಸ್ಯಗಳು ಇಲ್ಲಿ ಸಮೃದ್ಧವಾಗಿ ಬೆಳೆಯುತ್ತಿವೆ.

ಅರಣ್ಯ ಇಲಾಖೆ ಸಂರಕ್ಷಿಸಿ ಬೆಳೆಸಿರುವ ವಿವಿಧ ತಳಿಯ ಸಸ್ಯಗಳು ಪರಿಸರ ತಜ್ಞರು, ಸಂಶೋಧಕರು ಹಾಗೂ ಪ್ರಕೃತಿ ಪ್ರಿಯರ ಅಧ್ಯಯನ ಆಸಕ್ತಿಯನ್ನು ಹೆಚ್ಚಿಸುತ್ತಿವೆ.

**ಬೆಂಕಿಯ ಬಳಿಕವೂ ಅರಳಿದ ಹಸಿರು ಜೀವಂತಿಕೆ**

ಬೇಸಿಗೆಯಲ್ಲಿ ಕೆಲ ಕಿಡಿಗೇಡಿಗಳಿಂದ ಉಂಟಾದ ಬೆಂಕಿಗೆ ಕೆಲವೆಡೆ ಗಿಡ-ಮರಗಳು ಸುಟ್ಟು ಕರಕಲಾಗಿದ್ದರೂ, ಇದೀಗ ಸುರಿಯುತ್ತಿರುವ ಮಳೆಯಿಂದ ಮತ್ತೆ ಚಿಗುರೊಡೆದು ಹೂ-ಕಾಯಿಗಳನ್ನು ಬಿಟ್ಟಿವೆ. ಪ್ರಕೃತಿಯ ಪುನರುತ್ಥಾನದ ಈ ಅದ್ಭುತ ದೃಶ್ಯ ಪರಿಸರ ಪ್ರಿಯರಿಗೆ ಹೊಸ ಚೈತನ್ಯ ತುಂಬುತ್ತಿದೆ.

**ಅರಣ್ಯ ಇಲಾಖೆಯ ಕಣ್ಗಾವಲು**

ಮುಂಡರಗಿ ಅರಣ್ಯ ವಲಯಾಧಿಕಾರಿ ಮಂಜುನಾಥ ಆರ್. ಮೇಗಲಮನಿ ನೇತೃತ್ವದಲ್ಲಿ ಅರಣ್ಯ ಇಲಾಖೆಯ ಸಿಬ್ಬಂದಿ, ಸಿಸಿ ಕ್ಯಾಮೆರಾ ಹಾಗೂ ಡ್ರೋನ್ ಕ್ಯಾಮೆರಾಗಳ ಕಣ್ಗಾವಲು ವ್ಯವಸ್ಥೆಯಿಂದ ಕಪ್ಪತ್ತಗಿರಿಯ ಪರಿಸರ ಸಂರಕ್ಷಣೆ ಪರಿಣಾಮಕಾರಿಯಾಗಿ ನಡೆಯುತ್ತಿದೆ. ಇದರ ಫಲವಾಗಿ ಹೂ ಬಳ್ಳಿಗಳು ಹಾಗೂ ಔಷಧೀಯ ಸಸ್ಯಗಳು ಉತ್ತಮವಾಗಿ ಬೆಳೆಯಲು ಸಾಧ್ಯವಾಗಿದೆ.

**ಪ್ರಕೃತಿ ಮಡಿಲಲ್ಲಿ ಮನಮೋಹಕ ಕ್ಷಣಗಳು**

ಕಪ್ಪತ್ತಗುಡ್ಡದ ಗಿರಿ ಸಾಲುಗಳಲ್ಲಿ ಮೃದುವಾಗಿ ಬೀಸುವ ತಂಗಾಳಿ, ಆಕಾಶ ಮುಟ್ಟುವ ಬೆಳ್ಳಿಯಂತ ಮೋಡಗಳು, ವನ್ಯಮೃಗಗಳ ಜಿಗಿದಾಟ, ನವಿಲುಗಳ ನಾಟ್ಯ, ಹಕ್ಕಿಗಳ ಕಲರವ ಹಾಗೂ ಹಸಿರು ಹುಲ್ಲಿನ ಹಾಸು ನೋಡುಗರನ್ನು ಮಂತ್ರಮುಗ್ಧರನ್ನಾಗಿಸುತ್ತಿದೆ. ಅಲ್ಲದೆ ಹಲವು ದಶಕಗಳಿಂದ ಗುಹೆಗಳಲ್ಲಿ ನೆಲೆಸಿರುವ ಸಾಧು-ಸಂತರ ತಪೋಭೂಮಿ, ಕೆರೆಗಳು ಹಾಗೂ ಪ್ರಕೃತಿಯ ರಮಣೀಯ ದೃಶ್ಯಗಳು ಪ್ರವಾಸಿಗರಿಗೆ ವಿಶಿಷ್ಟ ಅನುಭವ ನೀಡುತ್ತಿವೆ.

### ವಿಶ್ವ ತಂಬಾಕು ನಿಷೇಧ ದಿನಾಚರಣೆಯಲ್ಲಿ ಆರ್ಇಸಿ ಹುಲಕೋಟಿ ವಿದ್ಯಾರ್ಥಿಗಳ ಜಾಗೃತಿ ವಾಕ್‌ಥಾನ್

# ತಂಬಾಕು ಬಿಡಿ-ಆರೋಗ್ಯ ಉಳಿಸಿ!

**■ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ವಿಶ್ವ ತಂಬಾಕು ನಿಷೇಧ ದಿನಾಚರಣೆಯ ಅಂಗವಾಗಿ RTE Society's Rural Engineering College ರಾಷ್ಟ್ರೀಯ ಸೇವಾ ಯೋಜನೆ (NSS) ಘಟಕದ ವತಿಯಿಂದ "ವಾಕ್‌ಥಾನ್ 2026" ಕಾರ್ಯಕ್ರಮವನ್ನು ಆಯೋಜಿಸಿ ಸಾರ್ವಜನಿಕರಲ್ಲಿ ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಲಾಯಿತು.




ಕೆ.ವಿ.ಕೆ. ಹುಲಕೋಟಿಯಿಂದ ಆರ್.ಇ.ಸಿ. ಹುಲಕೋಟಿವರೆಗೆ ನಡೆದ ವಾಕ್‌ಥಾನ್‌ನಲ್ಲಿ ವಿದ್ಯಾರ್ಥಿಗಳು, ಎನ್‌ಎಸ್‌ಎಸ್ ಸ್ವಯಂಸೇವಕರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉತ್ಸಾಹದಿಂದ ಭಾಗವಹಿಸಿದರು. "ತಂಬಾಕು ಬಿಡಿ – ಆರೋಗ್ಯ ಉಳಿಸಿ" ಎಂಬ ಘೋಷಣೆಗಳನ್ನು ಕೂಗಿ ಸಾರ್ವಜನಿಕರ ಗಮನ ಸೆಳೆದರು.

ಕಾಲೇಜಿನ ಪ್ರಾಂಶುಪಾಲ ಡಾ. ಬಿ. ಎನ್. ಪಾಟೀಲ ಮಾತನಾಡಿ, ವಿದ್ಯಾರ್ಥಿಗಳ ಸಾಮಾಜಿಕ ಕಳಕಳಿಯನ್ನು ಪ್ರಶಂಸಿಸಿದರು. ತಂಬಾಕು ಸೇವನೆಯಿಂದ ಉಂಟಾಗುವ ಅನಾರೋಗ್ಯದ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಅತ್ಯವಶ್ಯಕ ಎಂದು ಹೇಳಿದರು.

ಸಂಸ್ಥೆಯ ನಿರ್ದೇಶಕ ಡಾ. ವಿ. ಎಂ. ಪಾಟೀಲ ಮಾತನಾಡಿ, ಯುವಜನರು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿ ಕೊಳ್ಳಬೇಕು ಹಾಗೂ ಸಮಾಜಮುಖಿ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಕರೆ ನೀಡಿದರು.

ಸಂಸ್ಥೆಯ ಕಾರ್ಯದರ್ಶಿ ಸಚಿನ್ ಡಿ. ಪಾಟೀಲ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಪಿ. ಆರ್. ಪಾಟೀಲ ಕಾರ್ಯಕ್ರಮವನ್ನು ಸಂಯೋಜಿಸಿ, ಸಹಕರಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದ ಕೊನೆಯಲ್ಲಿ ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಸಂಕಲ್ಪ ಮಾಡಿದರು.

"ತಂಬಾಕು ಸೇವನೆ ಆರೋಗ್ಯವನ್ನಷ್ಟೇ ಅಲ್ಲ, ಕುಟುಂಬ ಮತ್ತು ಸಮಾಜದ ಭವಿಷ್ಯವನ್ನೂ ಹಾಳುಮಾಡುತ್ತದೆ. ಯುವಜನತೆ ಆರೋಗ್ಯಕರ ಬದುಕಿನತ್ತ ಹೆಜ್ಜೆ ಇಡಬೇಕು"

**– ಡಾ. ವಿ. ಎಂ. ಪಾಟೀಲ**

# ದಾರಿಯಲ್ಲಿ ಸಿಕ್ಕ ₹1.67 ಲಕ್ಷ ಪೊಲೀಸರಿಗೆ ಒಪ್ಪಿಸಿದ ಯುವಕರು!



**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ನಗರದ ಅಶೋಕ್ ಸರ್ಕಲ್ ಬಳಿ ಬೈಕ್‌ನಲ್ಲಿ ತೆರಳುತ್ತಿದ್ದ ವೇಳೆ ವ್ಯಕ್ತಿಯೊಬ್ಬರು ಕಳೆದುಕೊಂಡಿದ್ದ ₹1,67,330 ನಗದು ಹಣವನ್ನು ಇಬ್ಬರು ಯುವಕರು ಪ್ರಾಮಾಣಿಕವಾಗಿ ಪೊಲೀಸ್ ಠಾಣೆಗೆ ಒಪ್ಪಿಸಿ ಮಾದರಿಯಾಗಿದ್ದಾರೆ.

ಬೀರಪ್ಪ ತಂದೆ ಮರಿಯಪ್ಪ ಅವರು ಬೈಕ್‌ನಲ್ಲಿ ತೆರಳುವಾಗ ಹಣವಿದ್ದ ಬ್ಯಾಗ್ ದಾರಿಯಲ್ಲಿ ಬಿದ್ದಿತ್ತು. ಇದೇ ವೇಳೆ ಜಾಕೀರ್ ತಂದೆ ಅಬ್ದುಲ್ ಶುಕೂರ್ ಸಾಬ್ ಹಾಗೂ ಇಂದ್ರೇಶ್ ತಂದೆ ರಾಮಪ್ಪ ಕೊಳ್ಳಿ ದನಕಾದೊಡ್ಡಿ ಅವರಿಗೆ ಬ್ಯಾಗ್ ಸಿಕ್ಕಿದೆ.

ಬ್ಯಾಗ್ ಪರಿಶೀಲಿಸಿದಾಗ ಅದರೊಳಗೆ ₹1,67,330 ನಗದು ಇರುವುದನ್ನು ಕಂಡ ಇಬ್ಬರು, ಹಣವನ್ನು ತಮ್ಮ ಬಳಿ ಇಟ್ಟುಕೊಳ್ಳದೆ ತಕ್ಷಣವೇ ಕೊಪ್ಪಳ ನಗರ ಪೊಲೀಸ್ ಠಾಣೆಗೆ ತೆರಳಿ ಪೊಲೀಸರಿಗೆ ಒಪ್ಪಿಸಿದರು.

ನಂತರ ಪೊಲೀಸರು ಹಣ ಕಳೆದುಕೊಂಡಿದ್ದ ಬೀರಪ್ಪ ಅವರಿಗೆ ನಗದು ಹಣವನ್ನು ಹಸ್ತಾಂತರಿಸಿದರು.

ಸಂಕಷ್ಟದ ಕಾಲದಲ್ಲಿ ಪ್ರಾಮಾಣಿಕತೆ ಮೆರೆದ ಜಾಕೀರ್ ಹಾಗೂ ಇಂದ್ರೇಶ್ ಅವರ ಕಾರ್ಯವನ್ನು ಸಾರ್ವಜನಿಕರು ಹಾಗೂ ಪೊಲೀಸರು ಶ್ಲಾಘಿಸಿದ್ದಾರೆ.

# ಗುರುಸೇವೆಗೊಂದು ಗೌರವದ ವಿದಾಯ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಶಿಕ್ಷಕರ ವೃತ್ತಿಯನ್ನು ಅತ್ಯಂತ ಪ್ರಾಮಾಣಿಕತೆ, ನಿಷ್ಠೆ ಹಾಗೂ ಸೇವಾ ಮನೋಭಾವದಿಂದ ನಿರ್ವಹಿಸಬೇಕು ಎಂದು ಎಚ್.ಆರ್. ಭಜೆಂತ್ರಿ ಹೇಳಿದರು.

ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರಲ್ಲಿ ನಿವೃತ್ತಿಗೊಂಡ ಶಿಕ್ಷಕಿ ಎಸ್.ವಿ. ಹಿರೇಮಠ ಅವರನ್ನು ಸನ್ಮಾನಿಸಿ ಮಾತನಾಡಿದ ಅವರು, "ಗುರುಮಾತೆ ಎಸ್.ವಿ. ಹಿರೇಮಠ ಅವರು ಮಕ್ಕಳಿಗೆ ಅಚ್ಚುಮೆಚ್ಚಿನ ಶಿಕ್ಷಕಿಯಾಗಿ, ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ನೀಡಿ ಶಿಕ್ಷಕರ ವೃತ್ತಿಗೆ ಗೌರವ ತಂದುಕೊಟ್ಟಿದ್ದಾರೆ. ಇಂತಹ ಶಿಕ್ಷಕಿಯರು ಇಂದಿನ ಸಮಾಜಕ್ಕೆ ಅಗತ್ಯ" ಎಂದು ಹೇಳಿದರು.

ಶಿಕ್ಷಕಿ ವಿ.ಎಂ. ಕಂಠಿ ಮಾತನಾಡಿ, "ಎಸ್.ವಿ. ಹಿರೇಮಠ ಅವರು ಸಮಯ ಪರಿಪಾಲನೆ, ಮಕ್ಕಳ ಕಲಿಕೆ ಮತ್ತು ವಿದ್ಯಾರ್ಥಿಗಳೊಂದಿಗೆ ಉತ್ತಮ ಬಾಂಧವ್ಯ ಹೊಂದುವ ಮೂಲಕ ಶಿಕ್ಷಕರ ವೃತ್ತಿಗೆ ಮೌಲ್ಯ ತಂದುಕೊಟ್ಟಿದ್ದಾರೆ. ಅವರೊಂದಿಗೆ ಸೇವೆ ಸಲ್ಲಿಸಿರುವುದು ನಮ್ಮೆಲ್ಲರ ಸೌಭಾಗ್ಯ" ಎಂದರು.

ಕಾರ್ಯಕ್ರಮದಲ್ಲಿ ಶಾಲಾ ಪ್ರಧಾನ ಗುರುಮಾತೆ ಎಲ್.ಎ. ನಡುವಿನಮನಿ, ಪಿ.ಬಿ. ಕೆಂಚನಗೌಡ್ರ, ಕೆ.ಎಂ. ಹೇರಕಲ್, ಎಂ.ಎಂ. ಮೇಗಲಮನಿ, ಎಸ್.ಎಸ್. ಹುಣಶಿಮರದ, ಸಿದ್ದಲಿಂಗೇಶ ಶಿರಕೋಳ, ಎಚ್.ಆರ್. ಭಜೆಂತ್ರಿ, ಎಸ್.ವಿ. ಹಿರೇಮಠ, ಎಸ್.ಡಿ. ಪಂಡಿತ, ಶೈಲಾ ದೊಡ್ಡಮನಿ, ತ್ರಿವೇಣಿ ಬಡ್ನಿ, ಟಿ. ವೀಣಾ, ವಿ.ಎಂ. ಕಾಂಠಿ, ರತ್ನಾ ಬಬಲಿ, ವಿದ್ಯಾ ಹಾಳಕೇರಿ, ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡ್ರ, ರೂಪಾ ಬಗಾಡೆ, ಸಂಕಮ್ಮಾ ಯಳವತ್ತಿ ಹಾಗೂ ಲಕ್ಷ್ಮೀ ಬೇಂದ್ರೆ ಉಪಸ್ಥಿತರಿದ್ದರು.

# ಅತಿಥಿ ಶಿಕ್ಷಕರಿಗೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಶೈಕ್ಷಣಿಕ ಸಾಲಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆ, ಮುಂಡರಗಿಯಲ್ಲಿ ಅತಿಥಿ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಇಂಗ್ಲೀಷ್, ಹಿಂದಿ, ಸಮಾಜ ವಿಜ್ಞಾನ, ಉರ್ದು ಹಾಗೂ ದೈಹಿಕ ಶಿಕ್ಷಣ ವಿಷಯಗಳಿಗೆ ಬೋಧನೆ ಮಾಡಲು ಬಿ.ಎಡ್ ಹಾಗೂ ಸಂಬಂಧಿತ ವಿಷಯದಲ್ಲಿ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಜೂನ್ 4ರೊಳಗಾಗಿ ತಮ್ಮ ಶೈಕ್ಷಣಿಕ ದಾಖಲಾತಿಗಳೊಂದಿಗೆ ಮೌಲಾನಾ ಆಜಾದ್ ಮಾದರಿ ಶಾಲೆ, ಬಿ.ಎಡ್ ಕಾಲೇಜು ಹತ್ತಿರ, ಬ್ಯಾಲವಾಡಗಿ, ಮುಂಡರಗಿ ಇಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮುಖ್ಯೋಪಾಧ್ಯಾಯರು, ಮೌಲಾನಾ ಆಜಾದ್ ಮಾದರಿ ಶಾಲೆ ಅವರನ್ನು ಮೊಬೈಲ್ ಸಂಖ್ಯೆ 9844288513 ಮೂಲಕ ಸಂಪರ್ಕಿಸಬಹುದಾಗಿದೆ.

### ಹಮಾಲರ-ಚಕ್ಕಡಿಯವರ ಪ್ರತಿಭಾನ್ವಿತ ಮಕ್ಕಳಿಗೆ ನಡೆದ ಸನ್ಮಾನ ಸಮಾರಂಭದಲ್ಲಿ ಅಭಿಮತ

# ಶ್ರಮಿಕರ ಮಕ್ಕಳು ಅಧಿಕಾರಿಗಳಾಗಬೇಕು: ಕೃಷ್ಣಗೌಡ ಪಾಟೀಲ

**■ವಿಜಯಸಾಕ್ಷಿ ಸುದ್ದಿ, ಗದಗ**

"ಶ್ರಮಿಕರ ಮಕ್ಕಳು ಮತ್ತೆ ಶ್ರಮಿಕರಾಗಬೇಕಿಲ್ಲ. ಉತ್ತಮ ಶಿಕ್ಷಣ ಪಡೆದು ಡಾಕ್ಟರ್, ಇಂಜಿನಿಯರ್, ಅಧಿಕಾರಿಗಳು ಹಾಗೂ ಉದ್ಯಮಿಗಳಾಗಿ ಹೊರಹೊಮ್ಮಬೇಕು" ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ ಹೇಳಿದರು.



ಗದಗ ಎಪಿಎಂಸಿ ಪ್ರಾಂಗಣದ ಹಮಾಲರ ವಿಶ್ರಾಂತಿ ಗೃಹದ ಸಭಾಂಗಣದಲ್ಲಿ ಎಪಿಎಂಸಿ ಹಮಾಲರು ಹಾಗೂ ಚಕ್ಕಡಿ ಸಂಘದ ಸದಸ್ಯರ ಪ್ರತಿಭಾನ್ವಿತ ಮಕ್ಕಳಿಗೆ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಣವು ವ್ಯಕ್ತಿತ್ವ ವಿಕಸನಗೊಳಿಸಿ ವ್ಯಕ್ತಿಯನ್ನು ಅತ್ಯುನ್ನತ ಸ್ಥಾನಕ್ಕೇರಿಸುವ ಶಕ್ತಿ ಹೊಂದಿದೆ. ಪಾಲಕರು ತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣ ನೀಡಲು ಮುಂದಾಗಬೇಕು ಎಂದು ಕರೆ ನೀಡಿದ ಅವರು, "ಮುಂದೆ ಗುರಿ, ಹಿಂದೆ ಗುರು" ಎಂಬ ತತ್ವದೊಂದಿಗೆ ವಿದ್ಯಾರ್ಥಿಗಳು ಸಾಧನೆ ಮಾಡಬೇಕು ಎಂದು ಸಲಹೆ ನೀಡಿದರು.

ರಾಷ್ಟ್ರಪ್ರಶಸ್ತಿ ವಿಜೇತ ಶಿಕ್ಷಕ ಎಸ್.ಎನ್. ಬಳ್ಳಾರಿ ಮಾತನಾಡಿ, "ಡಾ. ಬಿ.ಆರ್. ಅಂಬೇಡ್ಕರ್ ಅವರ ಸಮಾನತೆ, ಸ್ವಾತಂತ್ರ್ಯ ಹಾಗೂ ಸಹೋದರತ್ವದ ಆದರ್ಶಗಳು ಇಂದಿನ ವಿದ್ಯಾರ್ಥಿಗಳಿಗೆ ದಾರಿದೀಪವಾಗಿವೆ. ಶಿಕ್ಷಣವು ಕೇವಲ ಉದ್ಯೋಗಕ್ಕಾಗಿ ಅಲ್ಲ; ಅದು ಸಾಮಾಜಿಕ ಬದಲಾವಣೆಯ ಅಸ್ತ್ರ" ಎಂದು ಹೇಳಿದರು.

ಕರ್ನಾಟಕ ರಾಜ್ಯ ಹಮಾಲರ ಒಕ್ಕೂಟದ ರಾಜ್ಯಾಧ್ಯಕ್ಷ ಅಯ್ಯಪ್ಪ ನಾಯ್ಕರ್ ಮಾತನಾಡಿ, ಹಮಾಲರು ಮತ್ತು ಚಕ್ಕಡಿಯವರ ಮಕ್ಕಳು ಉತ್ತಮ ಶಿಕ್ಷಣ ಪಡೆದು ಸಮಾಜದಲ್ಲಿ ಆದರ್ಶ ವ್ಯಕ್ತಿಗಳಾಗಬೇಕು. ತಂದೆ-ತಾಯಿಯ ಕಷ್ಟವನ್ನು ಅರ್ಥಮಾಡಿಕೊಂಡು ಅವರನ್ನು ಗೌರವಿಸುವ ಸಂಸ್ಕಾರ ಬೆಳೆಸಿಕೊಳ್ಳಬೇಕು ಎಂದರು.

ಎಪಿಎಂಸಿ ಹಮಾಲರು ಹಾಗೂ ಚಕ್ಕಡಿ ಸಂಘದ ಇತಿಹಾಸವನ್ನು ವಿವರಿಸಿದ ಅವರು, ಸಂಘಟನೆಯನ್ನು ಬಲಪಡಿಸಲು ಕೆ.ಎಚ್. ಪಾಟೀಲ, ಎಚ್.ಕೆ. ಪಾಟೀಲ ಹಾಗೂ ಡಿ.ಆರ್. ಪಾಟೀಲ ಅವರು ನೀಡಿದ ಕೊಡುಗೆಯನ್ನು ಸ್ಮರಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಆದಪ್ಪ ಮಾರೆಪ್ಪನವರ ಮಾತನಾಡಿ, "ನಾವು ಅನುಭವಿಸಿದ ಕಷ್ಟವನ್ನು ನಮ್ಮ ಮಕ್ಕಳು ಅನುಭವಿಸಬಾರದು. ಉತ್ತಮ ಶಿಕ್ಷಣದ ಮೂಲಕ ಅವರನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸೋಣ" ಎಂದು ಹೇಳಿದರು.

ಕಾರ್ಯದರ್ಶಿ ಇಮಾಮಸಾಬ ರೋಣದ ಸ್ವಾಗತಿಸಿದರು. ಉಪಾಧ್ಯಕ್ಷ ಮುಕ್ತುಮ್‌ಸಾಬ ನಾಗನೂರ ಪರಿಚಯಿಸಿದರು. ಖಜಾಂಚಿ ಶಂಕ್ರಪ್ಪ ಯರಗುಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಇಮಾಮಹುಸೇನ ರೋಣದ ನಿರೂಪಿಸಿದರು. ಗೋವಿಂದಪ್ಪ ಮುಂಡರಗಿ ವಂದಿಸಿದರು.

ವೇದಿಕೆಯಲ್ಲಿ ಎಪಿಎಂಸಿ ಕಾರ್ಯದರ್ಶಿ ಸುವರ್ಣಾ ವಾಲೀಕಾರ, ಉಪ ಕಾರ್ಯದರ್ಶಿ ಎಂ.ಆರ್. ನದಾಫ, ವಿರುಪಾಕ್ಷಪ್ಪ ಪಾಲ್ತಿ, ರಾಜೇಸಾಬ ಕಣವಿ, ಮಹ್ಮದ್‌ಸಾಬ ವಾಲೀಕಾರ, ಶೇಖಪ್ಪ ಮುಳವಾಡ, ಹುಸೇನಸಾಬ ವಡವಿ, ಹನಮವ್ವ ತುಮ್ಮರಮಟ್ಟಿ, ಮಲ್ಲವ್ವ ಸಣ್ಣಕ್ಕಿ ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಹುಸೇನಸಾಬ ವಡವಿ, ಫಕ್ರುಸಾಬ ಘಟದ, ದೇವರಾಜ ಬಿನ್ನಾಳ, ಮಾರುತಿ ರಾಲದೊಡಿ, ಬಸವರಾಜ ಚಲವಾದಿ, ಬಸವರಾಜ ಸೂಡಿ, ಬಸವರಾಜ ಶಗಣಿ, ಮಾಯಪ್ಪ ಬೆಣ್ಣಿ, ಸಿದ್ಧಪ್ಪ ಮುಧೋಳ, ದಾವಲಸಾಬ ಬೇಲೇರಿ ಸೇರಿದಂತೆ ಹಲವರು ಭಾಗವಹಿಸಿದ್ದರು.

**ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ**

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕಗಳನ್ನು ಪಡೆದ ರಕ್ಷಿತಾ ಇಮಡಿಗೌಡ್ರ, ಸವಿತಾ ಹಳ್ಳಿ, ಕಾವೇರಿ ಹಳ್ಳಿ, ಜುಲೇಕಾಬಿ ರೋಣ, ವಿನೂದ ಕೂಡಗಿ, ಅಶ್ವಿನಿ ಪಲ್ಲೇದ, ಪೂಜಾ ಗೊಳಗೊಳಕಿ, ಪ್ರಶಾಂತ ಕೊಟ್ನೇಕಲ್ಲ, ಭಾನು ಇರಕಲ್ಲ, ಮೇಘಾ ಗೂಳಣ್ಣನವರ, ಪ್ರಶಾಂತ ಮಾಳೆಕೊಪ್ಪ, ಮೇಘನಾ ಯರಗುಡಿ, ಸ್ಪಂದನಾ ಗೌಡರ, ವಂದನಾ ಗೌಡರ, ತನುಶ್ರೀ ಸಿಂಗಾಡಿ, ಕೀರ್ತಿ ಬಿಸನಳ್ಳಿ, ಸಹನಾ ರಾಲದೊಡ್ಡಿ ಹಾಗೂ ವಂದನಾ ರಾಲದೊಡ್ಡಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

"ಶಿಕ್ಷಣವೇ ಶ್ರಮಿಕರ ಮಕ್ಕಳ ಬದುಕು ಬದಲಿಸುವ ನಿಜವಾದ ಶಕ್ತಿ; ಓದಿನ ಮೂಲಕವೇ ಸಮಾಜದಲ್ಲಿ ಗೌರವದ ಸ್ಥಾನ ಸಿಗುತ್ತದೆ"

**– ಕೃಷ್ಣಗೌಡ ಎಚ್. ಪಾಟೀಲ,** ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka